ಶುಭ ನುಡಿ
ಮನುಷ್ಯರು ಕಲಿಯಲು ಬಯಸಿದರೆ, ಅವರ ಪ್ರತಿಯೊಂದು ತಪ್ಪುಗಳು,ಒಂದೊಂದು ಶಿಕ್ಷಣ ಕೊಡುತ್ತವೆ ತಪ್ಪಿನಿಂದ ಪಾಠ ಕಲಿತು,ತನ್ನ ಗುರಿ ಮುಟ್ಟುವುದೇ ಸಾಧಕನ ಕೆಲಸ ...
» ಶುಭೋದಯ

# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 143 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 19–12–2023 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 143 | Title- Code: KARKAN 28269 | Chitradurga | Date: 19-12-2023 Tuesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಶೀತಗಾಳಿಗೆ ಬೆಚ್ಚಿದ ಜನರು, ಎಚ್ಚರವಿರಲಿ ಆರೋಗ್ಯದೆಡೆ 2
ವಿವಿಧ ಬೇಡಿಕೆ ಈಡೇರಿಕೆಗಾಗಿ 1 ದಿನದ ಉಪವಾಸ ಸತ್ಯಾಗ್ರಹ 3
ಜೇನು ಕೃಷಿ: ಕಡಿಮೆ ಬಂಡವಾಳ, ಪರಿಸರ ಸ್ನೇಹಿ ಉಪಕಸುಬು 4

ಸುದ್ದಿ, ಜಾಹಿರಾತಿಗೆ 9686622252

## ಗ್ರಾಮ ಪಂಚಾಯತಿಗಳಲ್ಲಿ ಈ ಸ್ವತ್ತು ಹೆಸರಲ್ಲಿ ಹಣಕ್ಕೆ ಡಿಮ್ಯಾಂಡ್

# ನಮ್ಮವರ ಜೊತೆ ಮಾತಾಡಿ ಅಂತಾರೆ ಪಿಡಿಓ

» **ಚಿತ್ರದುರ್ಗ**

ನಮ್ಮವರ ಜೊತೆ ಮಾತನಾಡಿಕೊಂಡು ಬನ್ನಿ, ಇಲ್ಲ ನಿಮ್ಮನ್ನ ಬಂದು ಭೇಟಿ ಮಾಡತ್ತಾರೆ, ಮಾತಡಿ ಮುಗಿಸಿದರೆ ನಿಮ್ಮ ಕೆಲಸ ಆಗುತ್ತೆ, ಒಂದು ವಾರದಲ್ಲಿ ಕೊಡತ್ತಿನಿ ಅಂತರೇ ಪಿಡಿಓ ಗಳು, ಒಂದು ವೇಳೆ ಮಾತುಕತೆ ನಡೆದಿಲ್ಲ ಅಂದರೆ ಫೈಲ್ ಗೆ ರಿಸಿವ್ ಸಹಿ ಹಾಕದೇ ಸುಮ್ಮನೆ ಮೂಲೆಯಲ್ಲಿ ಇಟ್ಟರೆ ಮುಗಿತು ಫೈಲ್ ನಾವು ಮತ್ತೆ ಹೋದಾಗ ಮೇಲೆ ಬರುತ್ತೆ , ಕೇಳಿದರೆ ಲಿಗಲ್ ಆಗಬೇಕು. ನಾವು ಇನ್ನು ಫೈಲ್ ನೋಡಿಲ್ಲ, ಮೀಟಿಂಗ್ ಇದ್ದವು ಅಂತ ಕಥೆ ಹೇಳಿ ಸಾರ್ವಜನಿಕರನ್ನು ಅಲೆದಾಡಿಸುವ ಕೆಲಸ ಹಲವು ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಯಾವ ಅಡ್ಡಿ ಆತಂಕವಿಲ್ಲದೇ ಹಣ ವಸೂಲಿ ಮಾಡುತ್ತಿರುವ ಘಟನೆ ನಿರಂತರವಾಗಿ ನಡೆಯುತ್ತಿದ್ದರು ಮೇಲಾಧಿಕಾರಿಗಳು ಕಣ್ಮುಚ್ಚಿ ಕುಳಿತಿದ್ದಾರೆ.


ಬಡವರು, ಕೂಲಿ ಕಾರ್ಮಿಕರು, ವ್ಯಾಪಾರಿಗಳು ಸೇರಿ ಎಲ್ಲಾ ಜನರಿಗೆ ಸಮಯ ವ್ಯರ್ಥ ಹಾಗಬಾರ್ದು ಎಂದು ಈ ಸ್ವತ್ತು ಯೋಜನೆಯಲ್ಲಿ ಖಾತೆ ಬದಲಾವಣೆ, ಆಸ್ತಿ ನೊಂದಣಿ, ನಿವೇಶನ ರಿಜಿಸ್ಟರ್ ಸೇರಿ ಹಲವು ಕೆಲಸಗಳನ್ನು ಗ್ರಾಮ ಪಂಚಾಯತಿ ಹಂತದಲ್ಲಿ ಪಿಡಿಓ ಮತ್ತು ಸಿಬ್ಬಂದಿಗಳಿಗೆ ವಹಿಸಿ ಗ್ರಾಮೀಣ ಭಾಗದ ಜನರ ಸುಧಾರಣೆ ಮಾಡುವ ಕೆಲಸಕ್ಕೆ ಸರ್ಕಾರ ಮುಂದಾಗಿದೆ.

ರಾಜ್ಯ ಸರ್ಕಾರ ಭ್ರಷ್ಟಾಚಾರ ಮುಕ್ತ ಆಡಳಿತ ದೃಷ್ಟಿಯಿಂದ ಅನ್ ಲೈನ್ ಅರ್ಜಿ ಸಲ್ಲಿಸಿದ ಇಂತಿಷ್ಟು ದಿನಗಳಲ್ಲಿ ಕೆಲಸ ಮುಗಿಸಬೇಕು ಎಂದು ಸರ್ಕಾರಿ ಇಲಾಖೆಗಳಿಗೆ ಆದೇಶ ಇದ್ದರು ಸಹ ನಿಯಮ ಗಾಳಿಗೆ ತೂರಿ ವಸೂಲಿ ಕಾರ್ಯ ಎಗ್ಗಿಲ್ಲದೇ ನಡೆಯುತ್ತಿದ್ದು ಆಡಳಿತ ವ್ಯವಸ್ಥೆ ಕುಸಿದು ಹೋಗಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಲೋಕಯುಕ್ತ ದಾಳಿಗಳಲ್ಲಿ ಹಲವು ಪಿಡಿಓಗಳು ಲೋಕಯುಕ್ತ ಬಲೆಗೆ ಸಿಲುಕಿದರು ಸಹ ಪಿಡಿಓಗಳು ಮಾತ್ರ ಹಣ ವಸೂಲಿಗೆ ತಮ್ಮ ಕೆಳಹಂತದ ಸಿಬ್ಬಂದಿಗಳನ್ನು ನೇಮಿಸಿಕೊಂಡು ಭರ್ಜರಿ ವಸೂಲಿ ಮಾಡುತ್ತಿದ್ದು ಸರ್ಕಾರ ಈ ಸ್ವತ್ತು ಮೂಲಕ ಖಾತೆ ಬದಲಾವಣೆಗೆ 30 ದಿನಗಳಲ್ಲಿ ಅರ್ಜಿ ಪರಿಶೀಲನೆ ನಡೆಸಿ ಯಾವುದೇ ತಕಾರರು ಬರದಿದ್ದಂತಹ ಸಂದರ್ಭದಲ್ಲಿ ಈ ಸ್ವತ್ತು ವಿತರಣೆ ಮಾಡಲು ಅವಕಾಶ ಇದ್ದರು ಸಹ ಡೀಲ್ ಕುದುರಲಿಲ್ಲ ಅಂದರೆ ಈ ಸ್ವತ್ತು ಇಲ್ಲ ಎಂಬ ಮನಸ್ಥಿತಿಯಲ್ಲಿ ಇದ್ದು ಏಕೆ ಇಂತಹ ಧೋರಣೆ ಅನುಸರಿಸುತ್ತಿದ್ದಾರೆ ಎಂಬುದು ಅರ್ಥವಾಗುತ್ತಿಲ್ಲ.

ಸರ್ಕಾರಿ ಸಂಬಳ ಸೌಲಭ್ಯ ಪಡೆದು ನೆಮ್ಮದಿ ಬದುಕು ನಡೆಸುವ ಬದಲು ಭ್ರಷ್ಟಾಚಾರಕ್ಕೆ ಇಳಿದು ನೇರವಾಗಿ ಹಣ ವಸೂಲಿ ಮಾಡುತ್ತಿದ್ದಾರೆ. ಜಿಲ್ಲೆಯಲ್ಲಿ ಲೋಕಯುಕ ಬಲೆಗೆ ಹಲವು ಪಿಡಿಓ ಗಳು ಹಣ ವಸೂಲಿ ಸಂದರ್ಭದಲ್ಲಿ ಸಿಕ್ಕಿ ಬಿದ್ದರು ಸಹ ಗ್ರಾಮ ಪಂಚಾಯತಿ ಅಭಿವೃದ್ಧಿಗೆ ಆಸಕ್ತಿ ತೋರದೆ ಅಧಿಕಾರಿಗಳು ಸ್ವಯಂ ಅಭಿವೃದ್ಧಿಗೆ ನಿಂತಿದ್ದು ಗ್ರಾಮೀಣ ಭಾಗದ ಅಭಿವೃದ್ಧಿಗೆ ದೊಡ್ಡ ಹಿನ್ನಡೆಯಾಗಿದೆ.



ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ತಮ್ಮ ಕೆಲಸದ ಒಂದು ಭಾಗವಾದ ಈ ಸ್ವತ್ತು ವಿತರಣೆಯನ್ನು ಮನೆ ಮನೆಗೆ ತೆರಳಿ ಪಿಡಿಓಗಳು ಅರ್ಜಿ ಸಲ್ಲಿಸಿದ ನಂತಹ ಸರ್ಕಾರ ನಿಗದಿಪಡಿಸಿದ ದರವನ್ನು ಗ್ರಾಮ ಪಂಚಾಯತಿ ಕಟ್ಟಿದರೆ ಯಾವುದೇ ತಕರಾರು ಇಲ್ಲದ ಸಂದರ್ಭದಲ್ಲಿ ಅವರ ಮನೆಗೆ ಪೋಸ್ಟ್ ಅಥವಾ ಸಿಬ್ಬಂದಿ ಮೂಲಕ ಮನೆಗೆ ತಲುಪಿಸಬೇಕು. ಆದರೆ ಜನರೇ ಬಂದು ಅರ್ಜಿಗಳನ್ನು ನೀಡಿದರು ಪೇಮೆಂಟ್ ಆಗದೇ ಈ ಸ್ವತ್ತುಗಳು ವಿತರಣೆ ಆಗುತ್ತಿಲ್ಲ. ರಾಜ್ಯದ ಹಲವು ಜಿಲ್ಲೆ ಮತ್ತು ತಾಲೂಕು ಕೇಂದ್ರಗಳಲ್ಲಿ ಮನೆ ಮನೆಗೆ ಈ ಸ್ವತ್ತು ಒದಗಿಸುವ ಕೆಲಸ ಮಾಡುತ್ತಿದ್ದರು ಚಿತ್ರದುರ್ಗ ಜಿಲ್ಲೆಯಲ್ಲಿ ಮಾತ್ರ ಬೆರಳೆಣಿಕೆಯಷ್ಟು ಈ ಸ್ವತ್ತುಗಳನನ್ನು ಜನಸಂಪರ್ಕ ಸಭೆ , ಜನತಾ ದರ್ಶನ ಸಂದರ್ಭದಲ್ಲಿ ಸಿಇಓ ಅಥವಾ ಜಿಲ್ಲಾಧಿಕಾರಿ ಮೂಲಕ ಕೊಡಿಸಿ ಫೋಟೋ ತೆಗೆದುಕೊಂಡರೇ ಮುಗಿತು ಎಂದುಕೊಂಡಿರುವ ಪಿಡಿಓ ಗಳು ನಿಯಮ ಪಾಲಿಸುತ್ತಿಲ್ಲ.

**ಗ್ರಾಮ ಪಂಚಾಯತಿ ಭೇಟಿಗೆ ಇಓ ಗಳು ಹಿಂದೇಟು:** ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯತಿಗಳಿಗೆ ತೆರಳಿ ಸಭೆಗಳನ್ನು ಮಾಡುತ್ತಿಲ್ಲ. ಅಲ್ಲೊಂದು ಇಲ್ಲೊಂದು ಸಭೆ ಮಾಡಿ ಸುಮ್ಮನೆ ಆಗುತ್ತಿದ್ದಾರೆ. ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ನಿಯಂತ್ರಣದಲ್ಲಿ 35 ರಿಂದ 40 ಗ್ರಾಮ ಪಂಚಾಯತಿ ಬರುತ್ತಾವೆ. ತಿಂಗಳಿಗೆ 10 ದಿನ ಗ್ರಾಮ ಪಂಚಾಯತಿ ಭೇಟಿಗೆ ಸಮಯ ವ್ಯಯ ಮಾಡಿದರೆ ಖಂಡಿತವಾಗಿ ಗ್ರಾಮ ಪಂಚಾಯತಿಗಳ ಸುಧಾರಣೆ ಆಗುತ್ತವೆ. ಫೀಲ್ಡ್ ಗಿಳಿದು ಕೆಲಸ ಮಾಡದೇ ಆಫೀಸ್ ಕೆಲಸಕ್ಕೆ ಸಿಮೀತವಾಗಿದ್ದಾರೆ. ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯತಿ ಭೇಟಿಯಿಂದ ಗ್ರಾಮ ಪಂಚಾಯತಿಗಳಲ್ಲಿ ಪರಿಣಾಮಕಾರಿ ಕೆಲಸದ ಜೊತೆ ಪಿಡಿಓ ಗಳಿಗೆ ಬಿಸಿ ಮುಟ್ಟಿಸಿದಂತೆ ಆಗುತ್ತದೆ. ಇನ್ನಾದರೂ ಬದಲಾವಣೆ ಮಾಡಿಕೊಂಡು ಕಾಲಮಿತಿಯೊಳಗೆ ಸರ್ಕಾರದ ಈ ಸ್ವತ್ತು ಸೇರಿ ಸರ್ಕಾರದ ಕಾರ್ಯಕ್ರಮಗಳನ್ನು ಹಣವಿಲ್ಲದೇ ಜನರಿಗೆ ಮುಟ್ಟಿಸುವ ಕೆಲಸ ಮಾಡಲಿ. ಮುಂದಿನ ದಿನಗಳಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಒಂದಿಷ್ಟು ಎಚ್ಚರ ವಹಿಸಿ ಬಡ ಜನರ ಕೆಲಸ ಕಾರ್ಯ ಮಾಡುತ್ತಾರೋ ಅಥವಾ ತಮ್ಮ ಹಣ ವಸೂಲಿ ಕಾಯಕ ಮುಂದುವರಸುತ್ತಾರೋ ಕಾದು ನೋಡೋಣ.

# 60 ವರ್ಷ ಮೇಲ್ಪಟ್ಟವರಿಗೆ ಮಾಸ್ಕ್ ಕಡ್ಡಾಯ: ದಿನೇಶ್ ಗುಂಡೂರಾವ್





» **ಕೊಡಗು**

ರಾಜ್ಯದಲ್ಲಿ ಮಾಸ್ಕ್ ಕಡ್ಡಾಯಗೊಳಿಸಿದ ಆರೋಗ್ಯ ಇಲಾಖೆ 60 ವರ್ಷ ಮೇಲ್ಪಟ್ಟವರು ಮಾಸ್ಕ ಧರಿಸುವುದು ಕಡ್ಡಾಯ ಹೃದಯ ಸಮಸ್ಯೆ ಇರುವವರೆಗೂ ಮಾಸ್ಕ್ ಕಡ್ಡಾಯ ಮಾಡಲಾಗಿದೆ ಅದು ಕೊಡಗು ಜಿಲ್ಲೆಯ ಕುಶಾಲನಗರದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.ಈ ಕುರಿತಂತೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನ ಓಡಾಡದೆ ಇರುವಂತಹ ಪರಿಸ್ಥಿತಿ ನಿರ್ಮಾಣವಾಗಿಲ್ಲ.ಸಹಜ ಸ್ಥಿತಿಯಲ್ಲಿ ಇದೆ ಯಾವುದೇ ರೀತಿಯಾದ ನಿರ್ಬಂಧ ವಿಲ್ಲ.ಹೆಚ್ಚು ಪಾಸಿಟಿವ್ ಪ್ರಕರಣಗಳು ಬಂದರೆ ಮಾತ್ರ ನಿರ್ಬಂಧದ ಕುರಿತು ನಿರ್ಧಾರ ತೆಗೆದುಕೊಳ್ಳುತ್ತೇವೆ. ಸದ್ಯಕ್ಕೆ ರಾಜ್ಯದಲ್ಲಿ ಆ ರೀತಿ ಪರಿಸ್ಥಿತಿ ಇಲ್ಲ ಯಾವುದೇ ರೀತಿಯಾಗಿ ಆತಂಕ ಪಡುವುದು ಬೇಡ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಕೊರೊನ ರುಪಾಂತರ ತಡೆಯ ಬಗ್ಗೆ ಯಾರೂ ಕೂಡ ಭಯಪಡಬೇಕಿಲ್ಲ. 60 ವರ್ಷ ಮೇಲ್ಪಟ್ಟ ವೃದ್ಧರು ಎಲ್ಲರೂ ತಪಾಸನೆ ಮಾಡಿಕೊಳ್ಳಬೇಕು. ಕರೋನ ಲಕ್ಷಣ ಇದ್ದರೆ ಕಡ್ಡಾಯವಾಗಿ ಮಾಸ್ಕ ಧರಿಸಿ. ಅಗತ್ಯ ಕ್ರಮ ಕೈಗೊಳ್ಳುವ ಕುರಿತು ಸಭೆ ಮಾಡಿ ಚರ್ಚೆ ಮಾಡಿದ್ದೇವೆ. ಎಂದರು.

ಕೇಂದ್ರ ಸರ್ಕಾರ ಹಾಗೂ ತಜ್ಞರ ಜೊತೆ ಕೂಡ ಚರ್ಚೆ ಮಾಡಲಾಗಿದೆ. ಹೆಚ್ಚು ಟೆಸ್ಟಿಂಗ್ ಮಾಡುವಂತೆ ಆರೋಗ್ಯ ಇಲಾಖೆಗೆ ಸೂಚಿಸಲಾಗಿದೆ.ಅಗತ್ಯವಿರುವ ಬೆಡ್ ಪಿಪಿಇ ಕಿಟ್ ಆಕ್ಸಿಜನ್ ಗಳನ್ನು ಸಿದ್ಧತೆ ಮಾಡಿಕೊಳ್ಳಲಾಗಿದೆ. ಕೇರಳ ಗಡಿ ಜಿಲ್ಲೆಯಲ್ಲಿ ಹೆಚ್ಚು ಮುನ್ನೆಚ್ಚರಿಕೆ ವಹಿಸಲು ಸೂಚಿಸೆಲಾಗಿದೆ ಎಂದು ತಿಳಿಸಿದರು.

ಶೀತ, ಜ್ವರ,ಕೆಮ್ಮು ಇರುವವರು ಕರುನಾಟೆಸ್ಟ್ ಮಾಡಿಸಿಕೊಳ್ಳಬೇಕು ಹೆಚ್ಚು ಪಾಸಿಟಿವ್ ಬಂದರೆ ಅಷ್ಟೇ ನಿಷೇಧ. ಇದು ಅದು ಮಾಡಬಾರದು ಸದ್ಯಕ್ಕೆ ಅಂತಹ ಪರಿಸ್ಥಿತಿಯಿಲ್ಲ.ಯಾರು ಆತಂಕ ಪಡುವ ಅಗತ್ಯವಿಲ್ಲ ಎಂದು ಕುಶಾಲನಗರದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

# ಒಳ ಮೀಸಲಾತಿ; ಕಾಂಗ್ರೆಸ್‌ನಿಂದ ದಿಕ್ಕು ತಪ್ಪಿಸುವ ಕಾರ್ಯ: ಗೋವಿಂದ ಕಾರಜೋಳ

» **ಚಿತ್ರದುರ್ಗ**

ಕಾಂಗ್ರೆಸ್ ಸಮಾಜದಲ್ಲಿ ತಪ್ಪು ತಿಳುವಳಿಕೆ ಮೂಡಿಸುತ್ತಿದ್ದು, ಕೆಲವರು ಒಳ ಮೀಸಲಾತಿ ಬಗ್ಗೆ ದಿಕ್ಕುತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಬಿಜೆಪಿ. ಆರ್.ಎಸ್.ಎಸ್. ಸಾಮಾಜಿಕ ನ್ಯಾಯಕ್ಕೆ ಬದ್ದವಾಗಿದೆ ಎಂದು ಮಾಜಿ ಸಚಿವ ಗೋವಿಂದ ಕಾರಜೋಳ ಹೇಳಿದರು.

ತ.ರಾ.ಸು.ರಂಗಮಂದಿರದಲ್ಲಿ ಸೋಮವಾರ ನಡೆದ ಮಾದಿಗರ ಆತ್ಮಗೌರವ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ಅಸ್ಪೃಶ್ಯರು, ತುಳಿತಕ್ಕೊಳಗಾದವರನ್ನು ಮೇಲಕ್ಕೆತ್ತಬೇಕೆಂಬ ಉದ್ದೇಶದಿಂದ ಮೀಸಲಾತಿ ಕೊಡಬೇಕೆಂದು 1950 ರಲ್ಲಿ ಆದೇಶ ಜಾರಿಗೆ ತಂದಾಗ ಪರಿಶಿಷ್ಟ ಜಾತಿಯಲ್ಲಿ ಆರು ಜಾತಿಗಳು ಮಾತ್ರ ಇದ್ದವು. ಕಾಂಗ್ರೆಸ್ ಓಟ್ ಬ್ಯಾಂಕ್ ರಾಜಕಾರಣಕ್ಕಾಗಿ 101 ಜಾತಿಗಳನ್ನು ಸೇರಿಸಿದ ಪರಿಣಾಮ ಮೀಸಲಾತಿಗಾಗಿ ಕಳೆದ 32 ವರ್ಷಗಳಿಂದಲೂ ಹೋರಾಟ ಮಾಡಿಕೊಂಡು ಬರಲಾಗುತ್ತಿದೆ. ಬಲಾಢ್ಯರ ನಡುವೆ ಶೋಷಿತರು ಮೀಸಲಾತಿ ಪಡೆಯುವುದು ಕಷ್ಟ. ಎಸ್.ಎಂ.ಕೃಷ್ಣ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಸದಾಶಿವ ಆಯೋಗ ರಚಿಸಿ ಅನುದಾನ, ಸಿಬ್ಬಂದಿಯನ್ನು ಕೊಡಲಿಲ್ಲ. ನಾಲ್ಕುವರೆ ವರ್ಷಗಳ ಕಾಲ ರಾಜ್ಯದಲ್ಲಿ ಸುತ್ತಾಡಿ ವರದಿ ನೀಡಲಾಯಿತು. 2013 ರಲ್ಲಿ ಚುನಾವಣೆ ಎದುರಾದಾಗ ಸದಾಶಿವ ಆಯೋಗದ ವರದಿಯನ್ನು ಜಾರಿಗೆ ತರುತ್ತೇವೆಂದು ಕಾಂಗ್ರೆಸ್ ಪಕ್ಷ ಪ್ರಣಾಳಿಕೆಯಲ್ಲಿ ಸೇರಿಸಿ



ಅಧಿಕಾರಕ್ಕೆ ಬಂದ ಮೇಲೆ ಐದು ವರ್ಷಗಳ ಕಾಲ ತಿರುಗಿ ನೋಡಲಿಲ್ಲ. ಇನ್ನಾದರೂ ಪರಿಶಿಷ್ಟ ಜಾತಿ ಜನಾಂಗ ಎಚ್ಚೆತ್ತುಕೊಳ್ಳಬೇಕೆಂದು ಕರೆ ನೀಡಿದರು.

ಸದಾಶಿವ ಆಯೋಗದ ವರದಿಯನ್ವಯ ಪರಿಶಿಷ್ಟ ಜಾತಿಯಲ್ಲಿನ 101 ಒಳಜಾತಿಗಳಲ್ಲಿ ಯಾರನ್ನು ತೆಗೆದು ಹಾಕುವುದಿಲ್ಲ. ಜನಸಂಖ್ಯೆಗನುಗುಣವಾಗಿ ಆಯಾ ಜಾತಿಗೆ ಸಿಗಬೇಕಾದ ಮೀಸಲಾತಿ ದೊರಕಲಿ. ನಮ್ಮದೇನು ಅಭ್ಯಂತರವಿಲ್ಲ. ಭೋವಿ, ಲಂಬಾಣಿ ಜನಾಂಗದವರಲ್ಲಿ ತಪ್ಪು ತಿಳುವಳಿಕೆ ಮೂಡಿಸಲಾಗುತ್ತಿದೆ. ದೇಶಕ್ಕೆ ಸ್ವಾತಂತ್ರ್ಯ ಬಂದು ಎಪ್ಪತ್ತು ವರ್ಷಗಳಾಗಿದ್ದರು. ಪ್ರತಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ದಲಿತರನ್ನು ವಂಚಿಸುತ್ತಲೆ ಬರುತ್ತಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಮೋಸಗಾರ ದಲಿತರ ಪರವಾಗಿಲ್ಲ. ಈ ನಿಟ್ಟಿನಲ್ಲಿ ರಾಜ್ಯ ಮಟ್ಟದ ಸಭೆ ಕರೆದು ಸದಾಶಿವ ಆಯೋಗದ ವರದಿ ಒಳ ಮೀಸಲಾತಿ ಜಾರಿಯಿಂದ ಆಗುವ ಲಾಭವನ್ನು ತಿಳಿಸಲಾಗುವುದು. ಇಲ್ಲಿಯವರೆಗೂ ಕಾಂಗ್ರೆಸ್‌ಗೆ ಮತ ನೀಡುತ್ತ ಬರುತ್ತೀದ್ದೀರಿ ದಲಿತರು, ಅಸ್ಪೃಶ್ಯರನ್ನು ವಿದ್ಯಾವಂತರನ್ನಾಗಿ ಮಾಡುವಲ್ಲಿ ಕಾಂಗ್ರೆಸ್‌ಗೆ ಇಷ್ಟವಿಲ್ಲ. ಒಳ ಮೀಸಲಾತಿ ಜಾರಿಗೆ ಬಂದರೆ ಪರಿಶಿಷ್ಟ ಜಾತಿಯಲ್ಲಿನ ನೂರ ಒಂದು ಜಾತಿಯ ಯಾರಿಗೂ ಅನ್ಯಾಯವಾಗುವುದಿಲ್ಲ ಎಂದು ತಿಳಿಸಿದರು.

ಉಚಿತವಾಗಿ ಅಕ್ಕಿ, ರಾಗಿ, ಎರಡು ಸಾವಿರ ರೂ. ಆಸೆಯಿಂದ ಕಾಂಗ್ರೆಸ್ ಪಕ್ಷವನ್ನು ನಂಬಿ ಬಲಿಯಾಗಬೇಡಿ. ಎಸ್ಸಿಪಿ. ಟಿಎಸ್ಪಿ. ಹಣವನ್ನು ಐದು ಉಚಿತ ಗ್ಯಾರೆಂಟಿಗಳಿಗೆ ದುರ್ಬಳಕೆ ಮಾಡಿಕೊಂಡಿದ್ದಾರೆ. ಜ.17 ರಂದು ಸುಪ್ರೀಂಕೋರ್ಟ್‌ನಲ್ಲಿ ಏಳು ಸದಸ್ಯರುಳ್ಳ ಬೆಂಚ್‌ಗೆ ಮೀಸಲಾತಿ ಕೇಸ್ ಬರಲಿದೆ. ಇನ್ನು ಕೆಲವೇ ತಿಂಗಳುಗಳಲ್ಲಿ ನಮ್ಮ ಹೋರಾಟಕ್ಕೆ ಜಯ ಸಿಗಲಿದೆ. ಹೈದರಾಬಾದ್‌ನ ಸಿಕಂದರಾಬಾದ್‌ನಲ್ಲಿ ನಡೆದ ಮಾದಿಗರ ಬೃಹತ್ ಸಮಾವೇಶದಲ್ಲಿ ಭಾಗವಹಿಸಿದ್ದ ಪ್ರಧಾನಿ ನರೇಂದ್ರಮೋದಿ ದಲಿತರ ಪರವಾಗಿರುವುದಾಗಿ ಘೋಷಿಸಿದ್ದಾರೆ.

ಪುಟ 3

## ಫಾಸ್ಟ್ ನ್ಯೂಸ್

### ಹಾವು ಕಚ್ಚಿ ಮಹಿಳೆ ಸಾವು

» ಭರಮಸಾಗರ



ಹಾವು ಕಚ್ಚಿ ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ಸಮೀಪದ ಓಬಳಾಪುರ ಗ್ರಾಮದಲ್ಲಿ ಸೋಮವಾರ ನಡೆದಿದೆ. ಗಿರಿಜಮ್ಮ (65) ಮೃತ ಮಹಿಳೆ. ಜಮೀನಿನಲ್ಲಿರುವ ಅವರ ಮನೆ ಬಳಿ ಕೃಷಿ ಕೆಲಸದಲ್ಲಿ ನಿರತವಾಗಿದ್ದ ವೇಳೆ ವಿಷಕಾರಿ ಹಾವು ಕಚ್ಚಿದೆ. ತಕ್ಷಣ ಪ್ರಥಮ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆಯ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿತ್ತು. ಆಸ್ಪತ್ರೆಗೆ ದಾಖಲಿಸಿದ ಕೆಲವೇ ನಿಮಿಷಗಳಲ್ಲಿ ಗಿರಿಜಮ್ಮ ಅವರಿಗೆ ಚಿಕಿತ್ಸೆ ಫಲಿಸದೆ ಸಾವನ್ನಪ್ಪಿದ್ದಾರೆ. ಮೃತರು ಪತಿ ಮತ್ತು ಇಬ್ಬರು ಪುತ್ರರು ಒರ್ವ ಪುತ್ರಿಯನ್ನು ಅಗಲೀದ್ದಾರೆ. ಭರಮಸಾಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### 21ರಂದು ಪೂರ್ವ ಸಭೆ

» ಚಿತ್ರದುರ್ಗ

ಡಿಸೆಂಬರ್ 29ರಂದು ವಿಶ್ವಮಾನವ ದಿನಾಚರಣೆ ಹಾಗೂ 2024ರ ಜನವರಿ 01 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಆಚರಿಸುವ ಸಲುವಾಗಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಿ.21ರಂದು ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 11ಕ್ಕೆ ವಿಶ್ವಮಾನವ ದಿನಾಚರಣೆ ಪೂರ್ವಭಾವಿ ಸಭೆ ಹಾಗೂ ಮಧ್ಯಾಹ್ನ 12ಕ್ಕೆ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಪೂರ್ವಭಾವಿ ಸಭೆ ನಡೆಯಲಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸುವರು. ಸಭೆಗೆ ಸಮಾಜದ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿ ಸಲಹೆ ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### 22ರಂದು ಚಳ್ಳಕೆರೆಯಲ್ಲಿ ಜನತಾ ದರ್ಶನ

» ಚಿತ್ರದುರ್ಗ

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ನೇತೃತ್ವದಲ್ಲಿ ಇದೇ ಡಿಸೆಂಬರ್ 22ರಂದು ಚಳ್ಳಕೆರೆ ಪಟ್ಟಣದ ಶ್ರೀ ಗುರು ರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಜಿಲ್ಲಾಮಟ್ಟದ ಜನತಾ ದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಸಾರ್ವಜನಿಕರ ಕುಂದು ಕೊರತೆಗಳನ್ನು ಸ್ಥಳೀಯ ಮಟ್ಟದಲ್ಲಿ ನಿವಾರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಸೂಚನೆಯಂತೆ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ತಿಂಗಳು ಜಿಲ್ಲಾಮಟ್ಟದ ಜನತಾ ದರ್ಶನ ಏರ್ಪಡಿಸಲಾಗುತ್ತಿದ್ದು, ಈ ಬಾರಿಯ ಜಿಲ್ಲಾಮಟ್ಟದ ಜನತಾ ದರ್ಶನ ಇದೇ ಡಿಸೆಂಬರ್ 22ರಂದು ಬೆಳಿಗ್ಗೆ 10ಕ್ಕೆ ಚಳ್ಳಕೆರೆ ಪಟ್ಟಣದ ಶ್ರೀ ಗುರು ರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದೆ. ಜಿಲ್ಲಾಮಟ್ಟದ ಎಲ್ಲ ಅಧಿಕಾರಿಗಳು, ಜನಪ್ರತಿನಿಧಿಗಳು ಜನತಾ ದರ್ಶನದಲ್ಲಿ ಉಪಸ್ಥಿತರಿರುವರು. ಸಾರ್ವಜನಿಕರಿಂದ ಅರ್ಜಿಗಳನ್ನು ಪಡೆದು ಸ್ವೀಕೃತಿ ನೀಡುವ ಸಲುವಾಗಿ ಸಮರ್ಪಕ ರೀತಿಯಲ್ಲಿ ಕೌಂಟರ್‌ಗಳ ವ್ಯವಸ್ಥೆ ಮಾಡಲಾಗುವುದು. ಸಾರ್ವಜನಿಕರು ತಮ್ಮ ಕುಂದುಕೊರತೆ ಕುರಿತ ಅಹವಾಲು, ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

### ನಾಗತಿಹಳ್ಳಿ ಎನ್.ಸಿ.ರಾಜಪ್ಪ ನಿಧನ

» ಹೊಸದುರ್ಗ



ತಾಲೂಕಿನ ಮಾಡದಕೆರೆ ಹೋಬಳಿಯ ನಾಗತಿಹಳ್ಳಿ (ನಂದಿಪುರ) ಗ್ರಾಮದ ಲೇಟ್ ಚಂದಾಸಪ್ಪ ಎಂಬುವವರ ತೃತಿಯ ಪುತ್ರ ಎನ್.ಸಿ.ರಾಜಪ್ಪ (40) ಹೃದಯಾಘಾತದಿಂದ ನಿಧನ ಹೊಂದಿದ್ದು ಮೃತ ರಾಜಪ್ಪನಿಗೆ ಪತ್ನಿ ಹಾಗೂ 12 ವರ್ಷದ ಪುತ್ರ ಹಾಗೂ 10 ವರ್ಷದ ಪುತ್ರಿ ಇದ್ದು ಮೃತ ರಾಜಪ್ಪನ ಅಂತ್ಯಕ್ರಿಯೆಯು ಗ್ರಾಮದ ಹೊರವಲಯದಲ್ಲಿ ಮೃತನ ತಾಯಿ,ಸಹೋದರ ಸೇರಿದಂತೆ ಅಪಾರ ಬಂಧು ಬಳಗದ ನಡುವೆ ನೆರವೇರಿತು.

### ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಸಹಶಿಕ್ಷಕರು ಮತ್ತು ಮುಖ್ಯಶಿಕ್ಷಕರು, ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳಿಗೆ ಲಿಖಿತ ಪರೀಕ್ಷೆ ಮೂಲಕ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ವಿಸ್ತೃತವಾದ ವೇಳಾಪಟ್ಟಿಯನ್ನು ಹಾಗೂ ಅರ್ಜಿ ಸಲ್ಲಿಸಲು ಮಾರ್ಗಸೂಚಿ ಅಂಶಗಳ ಸಹಿತವಾಗಿ ಈಗಾಗಲೇ ಇಲಾಖಾ ವೆಬ್‌ಸೈಟ್ **https://schooleducation.karnataka.gov.in** ನಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. ಡಿ.30 ರೊಳಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದೆಂದು ಡಿಡಿಪಿಐ ಕೊಟ್ರೇಶ್.ಜಿ ತಿಳಿಸಿದ್ದಾರೆ.

ಖ್ಯಾತ ಲೇಖಕಿ ಹಾಗೂ ರಾಜ್ಯ ಲೇಖಕಿಯರ ಸಂಘದ ಅಧ್ಯಕ್ಷೆ ಡಾ: ಹೆಚ್.ಎಲ್.ಪುಷ್ಪಾ ಕಿವಿ ಮಾತು

# ನಿರಾಶ್ರಿತರಿಗೆ ಸಹಾಯ ಮಾಡುವ ಕೆಲಸಗಳನ್ನೂ ಕೂಡ ಸಂಘ ಸಂಸ್ಥೆಗಳು ಮಾಡಬೇಕಿದೆ

» ಬೆಂಗಳೂರು

ಇಂದು ಸಂಘ ಸಂಸ್ಥೆಗಳು ಮೌಲ್ಯಗಳ ಮೂಲಕ ನೈಜ ಕಾಳಜಿಯನ್ನ ಇಟ್ಟುಕೊಂಡು ಕೆಲಸ ಮಾಡಬೇಕಾಗಿದೆ ನಿರ್ಗತಿಕರಿಗೆ,ನೊಂದವರಿಗೆ,ದುರ್ಬಲರಿಗೆ, ನಿರಾಶ್ರಿತರಿಗೆ ಸಹಾಯ ಮಾಡುವ ಕೆಲಸಗಳನ್ನೂ ಕೂಡ ಸಂಘ ಸಂಸ್ಥೆಗಳು ಮಾಡಬೇಕಿದೆ ಎಂದು ಖ್ಯಾತ ಲೇಖಕಿ ಹಾಗೂ ರಾಜ್ಯ ಲೇಖಕಿಯರ ಸಂಘದ ಅಧ್ಯಕ್ಷೆ ಡಾ: ಹೆಚ್.ಎಲ್.ಪುಷ್ಪಾ ಕರೆ ನೀಡಿದರು.




ಜ್ಞಾನ ಸ್ಪಂದನ ಚಾರಿಟಬಲ್ ಟ್ರಸ್ಟ್ (ರಿ) ವತಿಯಿಂದ ಬೆಂಗಳೂರಿನ ಕನ್ನಡ ಭವನದ ನಯನ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಸುವರ್ಣ ಕನಾಟಕ 50 ರ ಸಂಭ್ರಮದ ಅಂಗವಾಗಿ ರಾಜ್ಯದ ನಾನಾ ಕಡೆಯ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ "ಕರುನಾಡ ಸಿರಿ ಸೇವಾ ರಾಜ್ಯಪ್ರಶಸ್ತಿ"ಪ್ರದಾನ ಸಮಾರಂಭ ಹಾಗೂ ಸಂಘದ ಉದ್ಘಾಟನಾ ಕಾರ್ಯಕ್ರಮ ಮತ್ತು ಕರ್ನಾಟಕರಾಜ್ಯೋತ್ಸವಕಾರ್ಯಕ್ರಮವನ್ನ ಉದ್ಘಾಟಿಸಿ ಮಾತನಾಡಿದರು.

ಸಂಘ ಸಂಸ್ಥೆಗಳನ್ನು ಕಟ್ಟುವುದು ಮತ್ತು ನಡೆಸಿದಕೊಂಡು ನಿಭಾಯಿಸಿಕೊಮಡು ಹೋಗುವುದು ತುಂಭಾ ಪ್ರಾಯಾಸದ ಕೆಲಸ, ಇದರ ಸಾಧಕ ಬಾಧಕಗಳು ಸಂಘ ಸಂಸ್ಥೆಗಳಲ್ಲಿ ಕೆಲಸ ಮಾಡಿದವರಿಗಷ್ಟೆ ಅದರ ಕಷ್ಟ ನಷ್ಟಗಳ ಅನುಭವವಾಗುತ್ತದೆ ಎಂದು ಹೇಳಿದ ಅವರು ಈ ಜ್ಞಾನ ಸ್ಪಂದನ ಚಾರಿಟಬಲ್ ಟ್ರಸ್ಟ್ ನಲ್ಲಿ ಇಬ್ಬರನ್ನ ಹೊರತುಪಡಿಸಿದರೆ ಇದರಲ್ಲಿ ಇರುವವರೆಲ್ಲರೂ ಸಹಾ ಮಹಿಳೆಯರೆ ಎಂಬುದು ನನಗೆ ಖುಷಿ ತಂದಿದೆ ಎಂದರು.

ಕರ್ನಾಟಕದ ಏಕೀಕರಣಕ್ಕಾಗಿ ಉತ್ತರ ಕರ್ನಾಟಕದ ಸಾಕಷ್ಟು ಮಂದಿ ದುಡಿದಿದ್ದಾರೆ ಎಂಬುವುದನ್ನು ನಾವು ಅಲ್ಲಗಳೆಯುವಂತಿಲ್ಲ, ಎಲ್ಲರ ಒಮ್ಮತದ ಹೋರಾಟದಿಂದ ಕರ್ನಾಟಕ ಕನ್ನಡ ನಾಡು ಎಂಬ ಹೆಸರನ್ನ ಪಡೆಯಿತು ಎಂಬ ಆಶಯವನ್ನ ವ್ಯಕ್ತಪಡಿಸಿದ ಅವರು ಅನೇಕ ಸಂಸ್ಥೆಗಳು ನಮ್ಮ ಕರ್ನಾಟದಕಲ್ಲಿ ಇವೆ ಕೆಲವು ಸಂಘ ಸಂಸ್ಥೆಗಳು ಸರ್ಕಾರದಿಂದ ಸೌಲಭ್ಯಗಳನ್ನ ಪಡೆದುಕೊಳ್ಳುತ್ತೆವೆ ಉಳಿದ ಕಲವು ಸರ್ಕಾರದ ಯಾವುದೇ ಅನುದಾನವಿಲ್ಲದಂತೆ ತಮ್ಮ ತಮ್ಮ ಶ್ರಮದ ಮೂಲಕ ಸಮಾಜ ಮುಖಿಯಾದ ಕೆಲಸ ಕಾರ್ಯಗಳನ್ನು ಮಾಡುವುದರ ಮೂಲಕ ನಡೆದುಕೊಂಡು ಹೋಗುತ್ತಿವೆ ಎಂದರು.

ಟ್ರಸ್ಟ್ ಅಧ್ಯಕ್ಷರಾದ ಶ್ರೀಮತಿ ಆರ್. ಸಾವಿತ್ರಮ್ಮ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಖ್ಯಾತ ಹೃದಯ ತಜ್ಞರಾದ ಡಾ:ವಿಜಯಲಕ್ಷ್ಮಿ ಬಾಳೆಕುಂದ್ರಿ, ಸಾಮಾಜಿಕ ಮತ್ತು ಜನಪರ ಚಿಂತಕ ಎಂ.ಡಿ.ಲಕ್ಷ್ಮೀನಾರಾಯಣ, ಖ್ಯಾತ ಹಿರಿಯ ವಕೀಲ ಮಂಜುನಾಥ್, ವಾಣಿಜ್ಯ ತೆರಿಗೆ ಇಲಾಖೆಯ ಜಂಟಿ ಆಯುಕ್ತ ಸಂಗಮೇಶಉಪಾಸೆ, ಸಾಕ್ಷ್ಯಚಿತ್ರ ನಿರ್ಮಾಪಕ ಆಗುಂಭೆನಟರಾಜ್, ಸಮಾಜ ಸೇವಕ ದಿಲ್‌ಸೆದಿಲೀಪ್, ದಾವಣಗೆರೆ ಸಿಂಡಿಕೇಟ್ ಸದಸ್ಯ ಹಾಗೂ ಸಮಾಜ ಸೇವಕ ಡಾ:ಎಂ. ಹೆಚ್.ಕೃಷ್ಣಮೂರ್ತಿ ಟ್ರಸ್ಟ್ ಕಾರ್ಯದರ್ಶಿ ಕಾಚಾಪುರರಂಗಪ್ಪ, ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ನಾಗತಿಹಳ್ಳಿಮಂಜುನಾಥ್ (ಸಾಹಿತ್ಯ) ಪರಮ್ಮ (ಶಿಕ್ಷಣ) ಮಂಜುಳಾಕ್ಷಿ (ಶಿಕ್ಷಣ) ಆಗುಂಭೆನಟರಾಜ್ (ಸಾಕ್ಷಾಚಿತ್ರ) ಸೇರಿದಂತೆ ಒಟ್ಟು 13 ಮಂದಿಗೆ ಕರುನಾಡ ಸಿರಿ ಸೇವಾ ರಾಜ್ಯ ಪ್ರಶಸ್ತಿ 2023 ನೀಡಿ ಗೌರವಿಸಿ ಸನ್ಮಾನಿಸಲಾಯಿತು. ಕಾರ್ಯಕ್ರಮದ ನಂತರ ಹೊಸದುರ್ಗ ದುರ್ಗಾಡ್ಯಾನ್ಸ್ ಮತ್ತು ಹೊಸದುರ್ಗ ಕನಕ ಮಹಿಳಾ ಸಾಂಸ್ಕೃತಿಕ ತಂಡದವರಿಂದ ಗೀತಗಾಯನ ಮತ್ತು ನೃತ್ಯ ಕಾರ್ಯಕ್ರಮಗಳು ನಡೆದವು.

## ಟಿವಿ, ಮೊಬೈಲ್ ಹಾವಳಿಯಲ್ಲೂ ಯುವಕರ ಸಾಧನೆ

» ದಾವಣಗೆರೆ

ಇಂದಿನ ಯುವ ಪೀಳಿಗೆ ಮೊಬೈಲ್, ಟಿವಿ, ಫೇಸ್‌ಬುಕ್, ವಾಟ್ಸಾಫ್‌ಗಳ ಹಾವಳಿಯಿಂದಾಗಿ ನಮ್ಮ ಜೀವನದ ಕಲೆ, ಸಾಹಿತ್ಯ, ಸಂಸ್ಕೃತಿ ಮರೆತಿದ್ದಾರೆ. ಈ ನಡುವೆಯೂ ಭಾನುವಾರ ಆವರಗೆರೆ ಗ್ರಾಮದ ಯುವಕರು ವಿವಿಧ ಕ್ಷೇತ್ರಗಳಲಿ ಗಣನೀಯ ಸಾಧನೆ ಮಾಡಿರುವುದು ಗ್ರಾಮದ ಹೆಗ್ಗಳಿಕೆ ಕಾರಣವಾಗಿದೆ ಎಂದು ಎಂದು ಮಹಾನಗರ ಪಾಲಿಕೆಯ ಮಾಜಿ ಸದಸ್ಯ, ಕಾರ್ಮಿಕ ಮುಖಂಡ ಹೆಚ್.ಜಿ.ಉಮೇಶ್ ಆವರಗೆರೆ ಹರ್ಷ ವ್ಯಕ್ತ ಪಡಿಸಿದರು.



ಆವರಗೆರೆಯ ಶೇಖರಪ್ಪ ಬಡಾವಣೆಯಲ್ಲಿನ ವಾಲ್ಮೀಕಿ ಉದ್ಯಾನವನದಲ್ಲಿಶ್ರೀಮಂಜುನಾಥ್ ಯುವಕ ಸಂಘ, ಶ್ರೀ ಕಾಯಕ ಯೋಗಿ ಬಸವ ಪರಿಸರ ವೇದಿಕೆ, ಶ್ರೀ ವಿನಾಯಕ ಭಜನಾ ಮಂಡಳಿ ಅವರಗೆರೆ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಅಭಿನಂದನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಆವರಗೆರೆ ಗ್ರಾಮವು 1959ರಲ್ಲಿ ರಾಷ್ಟ್ರೀಯ ಉತ್ತಮ ಮಾದರಿ ಗ್ರಾಮ ಪ್ರಶಸ್ತಿ ಪಡೆದಿತ್ತು. ಅಲ್ಲಿಂದ ಇಲ್ಲಿಯವರೆಗೆ ವಿವಿಧ ಹಂತಗಳ ಪ್ರಶಸ್ತಿಗೆ ಭಾಜನವಾಗಿದೆ. ಗ್ರಾಮಮಟ್ಟ, ತಾಲೂಕು ಮಟ್ಟ, ಜಿಲ್ಲಾಮಟ್ಟ, ರಾಜ್ಯಮಟ್ಟ ಸೇರಿದಂತೆ ಹಲವು ಪ್ರಶಸ್ತಿಗಳನ್ನು ಪಡೆದಿದೆ. ಗ್ರಾಮದಲ್ಲಿ ನಡೆಯುವ ಎಲ್ಲಾ ರಥೋತ್ಸವ, ಪಲ್ಲಕ್ಕಿ ಉತ್ಸವ, ನಾಟಕ, ಕ್ರೀಡಾಕೂಟ, ರಂಗೋಲಿಸ್ಪರ್ಧೆ, ಕೆಸರುಗದ್ದೆ ಓಟ ಸೇರಿದಂತೆ ವಿವಿಧ ಮೇಳಗಳನ್ನು ಆಯೋಜಿಸಲಾಗಿದೆ. ಇದಕ್ಕೆಲ್ಲಾ ಗ್ರಾಮದ ಯುವಕರ ಸಹಕಾರವೇ ಕಾರಣ ಎಂದರು.ಈ ಹಿಂದೆ ಒಕ್ಕಲುತನಕ್ಕೆ ಬಳಸುತ್ತಿದ್ದ ಬಂಡಿಯ ಗಾಲಿ, ರೋಣಕಲ್ಲು, ಬೀಸುವ ಕಲ್ಲುಗಳು ಸೇರಿದಂತೆ ಇನ್ನಿತರೆ ವಸ್ತುಗಳನ್ನು ಸಂಗ್ರಹಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪ್ರದರ್ಶನಕ್ಕೆ ಇಟ್ಟಿರುವುದು ಹೆಮ್ಮೆಯ ವಿಷಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಲಾವಿದ ಕೆ.ಬಾನಪ್ಪ, ಪ್ಯಾರಾ ಪವರ್‌ಲಿಫ್ಟರ್ ಕರಿಬಸಪ್ಪ, ಸಮಾಜ ಸೇವೆ ಮಾಡಿದ ಶೇಖರಪ್ಪ, ಭಜನೆ ಕಲಾವಿದ ಪಾಪಣ್ಣ ಸೇರಿದಂತೆ ಜಿಲ್ಲಾಡಳಿತ, ಮಹಾನಗರ ಪಾಲಿಕೆಯಿಂದ ಪ್ರಶಸ್ತಿಗೆ ಪುರಸ್ಕೃತರಾದ ಸಾಧಕರನ್ನು ಸನ್ಮಾನಿಸಲಾಯಿತು. ಅಧ್ಯಕ್ಷತೆಯನ್ನು ಎನ್.ಟಿ.ರುದ್ರಪ್ಪ ವಹಿಸಿದ್ದರು. ಸಭೆಯಲ್ಲಿ ಗೋಪಿನಾಯ್ಕ, ಪಾಲಿಕೆಯ ಹಾಲೇಶ್, ಬಿ.ಲೋಹಿತ್, ಶಾಮಿಯಾನವೀರೇಶ್,ಹಾಲೇಶಪ್ಪ, ಮಡ್ಡಿ ರೇವಣ್ಣ, ಎ.ತಿಪ್ಪೇಶ್, ಹೆಚ್. ಎಸ್.ಚಂದ್ರು, ಎಂ.ಇ.ರುದ್ರಮುನಿ, ಕರಿಬಸಪ್ಪ, ಮಹೇಶ್, ಶಿವರುದ್ರಪ್ಪ, ಗೋಣೆಪ್ಪ, ಎನ್.ಟಿ.ಸುರೇಶ್, ರೇವಣಸಿದ್ದಪ್ಪ, ಹನುಮಂತಪ್ಪ, ಬಾನಪ್ಪ, ಮಹಾಂತೇಶ್ ಇದ್ದರು.

## ಭಗೀರಥ ರಥ ಯಾತ್ರೆಗೆ ಉಪ್ಪಾರ ಸಮಾಜದಿಂದ ಭವ್ಯವಾದ ಸ್ವಾಗತ



» ಚಿತ್ರದುರ್ಗ

ಚಿತ್ರದುರ್ಗ ನಗರಕ್ಕೆ ಇಂದು ಆಗಮಿಸಿದ ಶ್ರೀ ಭಗೀರಥ ಭಾರತ ಜನ ಕಲ್ಯಾಣ ರಥ ಯಾತ್ರೆಗೆ ಉಪ್ಪಾರ ಸಮಾಜದವತಿಯಿಂದ ಭವ್ಯವಾದ ಸ್ವಾಗತವನ್ನು ಕೋರಲಾಯಿತು. ನಗರದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ಪಕ್ಕದ ಯೂನಿಯನ್ ಪಾರ್ಕನಿಂದ ಪ್ರಾರಂಭವಾದ ರಥಯಾತ್ರೆ ಸಂತೇಪೇಟೆ, ಬಿ.ಡಿ.ರಸ್ತೆ, ಕಿತ್ತೂರುರಾಣಿ ಚನ್ನಮ್ಮ ವೃತ್ತ, ಮಹಾವೀರ ವೃತ್ತ, ವಾಸವಿ ವೃತ್ತ, ಗಾಯತ್ರಿ ವೃತ್ತದ ಮೂಲಕ ಉಮಾಪತಿ ಕಲ್ಯಾಣ ಮಂಟಪ ತಲುಪಿತು. ಈ ಸಮಯದಲ್ಲಿ ವಿವಿಧ ಜಾನಪದ ಕಲಾಮೇಳಗಳು, ರಥಯಾತ್ರೆಯನ್ನು ಸ್ವಾಗತಿಸಿದವು. ಹರೀಶ್ ಮೆಹತೊ ಚೌಹಾಣ್ ಮತ್ತು ತಂಡದ ನೇತೃತ್ವದಲ್ಲಿ ಈ ಯಾತ್ರೆ ಪ್ರಾರಂಭವಾಗಿದ್ದು, ಈಗಾಗಲೇ ನೆರೆ ರಾಜ್ಯಗಳಾದ ಆಂಧ್ರಪ್ರದೇಶ್, ತೆಲಂಗಾಣ, ಮಹಾರಾಷ್ಟ್ರ,ಗುಜರಾತ್ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಸಂಚಾರ ಮಾಡಿ ಡಿ.9 ರಂದು ಕರ್ನಾಟಕ ರಾಜ್ಯವನ್ನು ಪ್ರವೇಶ ಮಾಡಿದೆ ಅಲ್ಲಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಯಾತ್ರೆ ಸಂಚಾರ ಮಾಡಿ ಇಂದು ಚಿತ್ರದುರ್ಗ ಜಿಲ್ಲೆಯನ್ನು ಪ್ರವೇಶಿಸಿದೆ. 2024ರ ಫೆಬ್ರವರಿ ಮಾಹೆಯಲ್ಲಿ ನವದೆಹಲಿಯ ರಾಮಲೀಲಾ ಮೈದಾನವನ್ನು ತಲುಪಲಿದೆ. ರಥಯಾತ್ರೆಯಲ್ಲಿ ಉಪ್ಪಾರ ಸಮುದಾಯದ ಮಹಿಳೆಯರು ತಲೆಯ ಮೇಲೆ ಕುಂಭವನ್ನು ಹೊತ್ತು ರಥಯಾತ್ರೆಯನ್ನು ಸ್ವಾಗತಿಸಿದರು. ಯುವ ಜನತೆ ಕೊರಳಿಗೆ ಜೈ ಉಪ್ಪಾರ ಎಂಬ ನಾಮಫಲಕದ ಶಾಲನ್ನು ಹಾಕಿಕೊಂಡು ಜೈ ಉಪ್ಪಾರ, ಜೈ ಜೈ ಉಪ್ಪಾರ, ಡಾ.ಪುರೋಷತ್ತಮಾನಂದ ಶ್ರೀಗಳಿಗೆ ಜೈಕಾರವನ್ನು ಹಾಕುತ್ತಾ ಸಾಗುತ್ತಿದ್ದ ದೃಶ್ಯ ಕಂಡು ಬಂದಿತು. ಈ ರಥಯಾತ್ರೆಯ ಮೆರವಣಿಗೆಯ ನೇತೃತ್ವವನ್ನು ಹೊಸದುರ್ಗ ತಾಲ್ಲೂಕಿನ ಬಿ.ವಿ.ನಗರದ ಭಗೀರಥ ಪೀಠದ ಶ್ರೀ ಡಾ.ಪುರೋಷತ್ತಮಾನಂದ ಶ್ರೀಗಳು ವಹಿಸಿದ್ದರು.

ಈ ಸಂದರ್ಭದಲ್ಲಿ ಶ್ರೀ ಭಗೀರಥ ಜಿಲ್ಲಾ ಉಪ್ಪಾರ ಸಮಾಜದ ಅಧ್ಯಕ್ಷರಾದ ಎನ್.ವಿರೇಶ್, ಗೌರವಾಧ್ಯಕ್ಷರಾದ ಎಸ್.ನಾಗರಾಜ್ ಪ್ರದಾನ ಕಾರ್ಯದರ್ಶಿ ಎಲ್.ಮಹೇಶ್, ಮಾಜಿ ಅಧ್ಯಕ್ಷರಾದ ಆರ್, ಮೂರ್ತಿ, ಖಂಜಾಚಿ ಹೆಚ್.ಅಂಜಪ್ಪ, ಚಿತ್ರದುರ್ಗ ತಾ.ಅಧ್ಯಕ್ಷ ಸಿದ್ದಪ್ಪ, ಕಾರ್ಯದರ್ಶಿ ತಿಪ್ಪೇಸ್ವಾಮಿ, ಉಪಾಧ್ಯಕ್ಷರಾದ ಬಾಯ್ಲರ್ ರವಿ, ಸಲಹೆಗಾರರಾದ ಬಸವರಾಜು ಮತ್ತು ವೆಂಕಟೇಶ್ ಹಾಜರಿದ್ದರು.

## ಭಗೀರಥ ಭಾರತ ಜನಕಲ್ಯಾಣ ರಥಯಾತ್ರೆಗೆ ಅದ್ದೂರಿ ಸ್ವಾಗತ

» ಹೊಸದುರ್ಗ

ಉಪ್ಪಾರ ಸಮಾಜದ ಸಂಘಟನೆಗಾಗಿ ದೇಶದ ವಿವಿಧಡೆ ಸಂಚಾರ ನಡೆಸುತ್ತಿರುವ ಭಗೀರಥ ಭಾರತ ಜನಕಲ್ಯಾಣ ರಥಯಾತ್ರೆ ಸೋಮವಾರ ಬೆಳಗ್ಗೆ ಹೊಸದುರ್ಗ ಪಟ್ಟಣವನ್ನು ಪ್ರವೇಶಿಸಿತು. ಈ ರಥಯಾತ್ರೆಯ ಸಾನಿಧ್ಯವನ್ನು ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮನಂದಪುರಿ ಸ್ವಾಮೀಜಿ ವಹಿಸಿದ್ದರು. ಪಟ್ಟಣದ ವೀರಭದ್ರೇಶ್ವರ ಸ್ವಾಮಿ ದೇವಾಲಯದಿಂದ ಪ್ರಾರಂಭವಾದ ರಥಯಾತ್ರೆ, ಮದಕರಿ ಸರ್ಕಲ್, ಬಸವೇಶ್ವರ ಸರ್ಕಲ್, ಗಾಂಧಿ ಸರ್ಕಲ್ ಮೂಲಕ ಅಂಬೇಡ್ಕರ್ ಸರ್ಕಲ್ ತಲುಪಿತು. ರಥಯಾತ್ರೆಗೆ ವಿವಿಧ ಜಾನಪದ ಕಲಾತಂಡಗಳು ಮೆರಗು ನೀಡಿದವು. ರಥ ಯಾತ್ರೆಯಲ್ಲಿ ಉಪ್ಪಾರ ಸಮುದಾಯದ ಮಹಿಳೆಯರು ಮತ್ತು ಯುವತಿಯರು ತಲೆಯ ಮೇಲೆ ಕುಂಬ ಹೊತ್ತು ಜೈ ಉಪ್ಪಾರ.. ಜೈ



ಜೈ ಉಪ್ಪಾರ ಎಂದು ಜೈಕಾರ ಹಾಕುತ್ತಾ ರಸ್ತೆಯುದ್ದಕ್ಕೂ ಸಾಗಿ ಬಂದರು.ರಥಯಾತ್ರೆ ಕುರಿತು ತಾಲೂಕು ಉಪ್ಪಾರ ಸಮಾಜದ ಅಧ್ಯಕ್ಷ ಪರಪ್ಪ ಮಾತನಾಡಿ, ಭಗೀರಥ ಜಯಂತಿಯನ್ನು ಕರ್ನಾಟಕ ರಾಜ್ಯದ ಜೊತೆಗೆ ದೇಶದಾದ್ಯಂತ ಆಚರಿಸಲು ಆದೇಶಿಸುವಂತೆ ಕೇಂದ್ರ ಸರ್ಕಾರಕ್ಕೆ ಹಕ್ಕೋತ್ತಾಯ ಮಾಡುತ್ತೇವೆ. ಅದರಂತೆಯೇ, ಉಪ್ಪಾರ ಸಮುದಾಯವನ್ನು ರಾಜ್ಯ ಮತ್ತು ಕೇಂದ್ರದಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕೆಂದು ಒತ್ತಾಯಿಸಿದರು.

ಪ್ರಮುಖ ಸುದ್ದಿ

# ಶೀತಗಾಳಿಗೆ ಬೆಚ್ಚಿದ ಜನರು, ಎಚ್ಚರವಿರಲಿ ಆರೋಗ್ಯದೆಡೆ

» ಮಹದೇವಪುರ ಶಿವಮೂರ್ತಿ

ಪರಶುರಾಂಪುರ: ಚಳಿಯ ಜತೆಗೆ ವಾತವರಣ ವೈಪರಿತ್ಯಕ್ಕೆ ಬಯಲು ಸೀಮೆಯು ಮೋಡ ಕವಿದ ವಾತವರಣವಿದ್ದು,ತಣ್ಣನೆಯ ಗಾಳಿ ಬೀಸುತ್ತಿದೆ.ಇದು ಮಕ್ಕಳ,ವೃದ್ಧರ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ.ಅಲ್ಲದೆ ಬೆಳಗಿನ ಜಾವದಿಂದ ಹಿಡಿದು ಸಂಜೆಯ ತನಕ ತಂಪು ಗಾಳಿ ಬೀಸುತ್ತಿದ್ದು,ಇದು ಜನರ ಮೇಲೆ ನೇರ ಪರಿಣಾಮ ಬೀರುತ್ತಿದೆ.ವಯಸ್ಸಾದವರಲ್ಲಿ ಹಾಗೂ ಮಕ್ಕಳಲ್ಲಿ ಆರೋಗ್ಯದಲ್ಲಿ ಏರುಪೇರು ಹೆಚ್ಚುತ್ತಿದೆ.ವಾಕಿಂಗ್ ಹೋಗಲು ಸಹ ಹೆದುರುವಂತಾಗಿದೆ.



ಮಕ್ಕಳಲ್ಲಿ ಜ್ವರ,ಶೀತ ಕಂಡು ಬರುತ್ತಿದ್ದು,ಹೊರಗಡೆ ಹೋಗದಂತಹ ಪರಿಸ್ಥಿತಿನಿರ್ಮಾಣವಾಗಿದೆ.ಮಳೆಗಾಲವಾದರೂ ಮಳೆಯಿಲ್ಲದೆ ಕೇವಲ ತಂಪು ಗಾಳಿ ಬೀಸುವುದರಿಂದ ದೈಹಿಕವಾಗಿ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ.

ಶೀತಾಗಾಳಿಯಿಂದ ವೃದ್ಧರು,ಮಕ್ಕಳಿಗೆ ರಕ್ಷಣೆಬೇಕು.ಕೆಲವೊಂದುರೋಗವುಳ್ಳವರು ಆದಷ್ಟು ರಕ್ಷಣೆಯಿಂದ ಇರಬೇಕು.ಮೈ ಕೈ ನೋವು,ದಮ್ಮು ಕೆಮ್ಮು ಹೆಚ್ಚುವುದರಿಂದ ಬೆಳಗಿನ ಜಾವ ಬೆಚ್ಚಗೆ ಇರಬೇಕು.ಬಿಸಿ ನೀರು ಕುಡಿಯಬೇಕು ಬಿಸಿ ಹಾಗೂ ಉತ್ತಮ ರೀತಿ ಊಟ ಮಾಡುವುದರ ಕಡೆ ಗಮನ ನೀಡಬೇಕೆಂದು ಹಿರಿಯರು ಅಭಿಪ್ರಾಯವಾಗಿದೆ.

**ಇಡೀ ದಿನ ಬೀಸುತ್ತಿದೆ ತಂಪು ಗಾಳಿ:** ವಾಯುಭಾರ ಕುಸಿತಕ್ಕೆ ರೈತರು ಬೆಳೆಗಳಲ್ಲಿ ನಷ್ಟವಾಗಿದೆ.ಈಗ ತಂಪು ಗಾಳಿ ಸಾರ್ವಜನಿಕರ ಆರೋಗ್ಯದಲ್ಲಿ ಏರುಪೇರು ಮಾಡಲು ಬೀಸುತ್ತಿದೆ.ಮಳೆಯ ಮಾಯವಾಗಿ ಈಗ ತಂಪು ಗಾಳಿಯಿಂದ ಹಲವು ಬೆಳೆಗಳ ಕುಂಠಿತದಿಂದ ಮೈ ಮನ ಬೇಸರವಾದಂತಾಗಿದೆ.ಯಾವುದೇ ಕೆಲಸ ಕಾರ್ಯಗಳಲ್ಲಿ ಕ್ರಿಯಾಶೀಲತೆಯಿಲ್ಲದೆ ಸುಸ್ತು ಹಿಡಿದಂತಾಗಿದೆ.ತಂಪು ಗಾಳಿಯಲ್ಲಿ ಕೆಲಸ ಮಾಡಿ ಮನೆಗೆ ಬಂದರೆ ಜ್ವರ ಕೆಮ್ಮು ಬಂದಂತಾಗಿ ಭಯ ಹುಟ್ಟಿಸುತ್ತಿದೆ ಎನ್ನುವ ಮಾತುಗಳು ಕೇಳಿ ಬರುತ್ತಿವೆ.

### ಚಳಿಗೆ ಹೊರಬಂದ ಬೆಚ್ಚನೆಯ ಉಡುಪು



ಚಳಿಗೆ ಸ್ವೆಟ್ಟರ್,ಮಂಕಿ ಕ್ಯಾಪ್ ಮುಂತಾದ ಬೆಚ್ಚನೆ ಉಡುಗೆ ತೊಡಲು ಮೊರೆ ಹೋಗುತ್ತಿದ್ದಾರೆ.ಭಯ ಹುಟ್ಟಿಸಿದ ತಣ್ಣೆಯ ಗಾಳಿಗೆ ವಾಯುವಿಹಾರಿಗಳ ಸಂಖ್ಯೆ ಕಡಿಮೆಯಾಗಿದೆ.ಹವಾಮಾನ ಬದಲಾವಣೆಯಿಂದ ಬೆಳಗ್ಗೆ ಬರುವುದನ್ನಾ ಬಿಟ್ಟು ಕೆಲವರು ಸಂಜೆ ವೇಳೆಯಲ್ಲಿ ವಾಕಿಂಗ್ ಹೋಗುವದನ್ನ ಕಾಣಬಹುದಾಗಿದೆ.

## ಫಾಸ್ಟ್ ನ್ಯೂಸ್

### ಡಿ.19 ರಂದು ಇ.ಎಲ್.ಸಿ ಚಟುವಟಿಕೆ ಸ್ಪರ್ಧೆಗಳು

» **ಚಿತ್ರದುರ್ಗ**

ಮತದಾನದ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಸಲುವಾಗಿ, ನಗರದ ಗಾರೆಹಟ್ಟಿಯ ಶ್ರೀ ಬೃಹನ್ಮಠ ಪ್ರೌಢಶಾಲೆಯಲ್ಲಿ, ಡಿ.19 ರಂದು ಬೆಳಿಗ್ಗೆ 10 ಗಂಟೆಗೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಇ.ಎಲ್.ಸಿ ಚಟುವಟಿಕೆಗಳ ಸ್ಪರ್ಧೆ ಆಯೋಜಿಸಲಾಗಿದೆ. ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಪ್ರಬಂಧ, ಪೋಸ್ಟರ್ ಮೇಕಿಂಗ್ ಹಾಗೂ ರಸಪ್ರಶ್ನೆ ಸ್ಪರ್ಧೆಗಳು ನಡೆಯುವವು ಎಂದು ಜಿಲ್ಲಾ ನೋಡಲ್ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಒಳ ಮೀಸಲಾತಿ; ಕಾಂಗ್ರೆಸ್‌ನಿಂದ ದಿಕ್ಕು ತಪ್ಪಿಸುವ ಕಾರ್ಯ: ಗೋವಿಂದ ಕಾರಜೋಳ

» **ಮೊದಲ ಪುಟದಿಂದ**

ಕಾಂಗ್ರೆಸ್‌ನಂತೆ ವಂಚನೆ ಮಾಡುವ ಪಕ್ಷ ನಮ್ಮದಲ್ಲ ಎಂದು ಹೇಳಿದರು. ನಿವೃತ್ತ ಐ.ಎ.ಎಸ್. ಅಧಿಕಾರಿ ಲಕ್ಷ್ಮಿನಾರಾಯಣ ಮಾತನಾಡಿ ಶಿಕ್ಷಣ, ಉದ್ಯೋಗ, ರಾಜಕೀಯ ಅಧಿಕಾರದಿಂದ ನಮ್ಮವರು ವಂಚನೆಗೊಳಗಾಗುತ್ತಲೆ ಬರುತ್ತಿರುವುದಕ್ಕಾಗಿ ಅನೇಕ ವರ್ಷಗಳಿಂದಲೂ ಒಳ ಮೀಸಲಾತಿಗಾಗಿ ಹೋರಾಟ ನಡೆಯುತ್ತಿದೆ. ಸದಾಶಿವ ಆಯೋಗದ ವರದಿ ಜಾರಿಗಾಗಿ ಕೂಡಲ ಸಂಗಮದಿಂದ ಚಿತ್ರದುರ್ಗಕ್ಕೆ ಪಾದಯಾತ್ರೆ ಬಂದಿತು. ದಲಿತರು, ಅಸ್ಪೃಶ್ಯರು ಒಳ ಮೀಸಲಾತಿ ಬಗ್ಗೆ ಕೆಲವರು ತಪ್ಪು ತಿಳುವಳಿಕೆ ಮೂಡಿಸುತ್ತಿರುವುದರ ವಿರುದ್ದ ಎಚ್ಚರದಿಂದಿರಿ ಎಂದು ಮನವಿ ಮಾಡಿದರು.

ಗುರುನಾಥ್ ದ್ಯಾಮವ್ವನವರ್ ಒಳ ಮೀಸಲಾತಿ ಕುರಿತು ಮಾತನಾಡಿದರು. ಕೇಂದ್ರ ಮಂತ್ರಿ ಎ.ನಾರಾಯಣಸ್ವಾಮಿರವರ ಆಪ್ತ ಸಹಾಯಕ ಮೋಹನ್ ಪ್ರಾಸ್ತಾವಿಕವಾಗಿ ಮಾತನಾಡಿದರು.ಸಾಬು ದೊಡ್ಮನಿ, ಬಿ.ಆರ್. ಮುನಿರಾಜು, ಹುಲ್ಲೂರು ಕುಮಾರ್, ಡಿ.ಎಸ್. ಎಸ್.ಮುಖಂಡ ಮಹಾಂತೇಶ್, ಮಾದಿಗ ದಂಡೋರ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ, ನಿವೃತ್ತ ಕೆ.ಎ.ಎಸ್.ಅಧಿಕಾರಿ ಪರಶುರಾಮ್, ರಾಜಣ್ಣ, ಡಿ.ಓ. ಮುರಾರ್ಜಿ ವೇದಿಕೆಯಲ್ಲಿದ್ದರು.

### ಪ್ರಸಕ್ತ ಸಾಲಿನ ಭತ್ತ, ರಾಗಿ, ಜೋಳ ಖರೀದಿಗೆ ರೈತರ ನೋಂದಣಿ, ಖರೀದಿ ಪ್ರಕ್ರಿಯೆ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ನೇರವಾಗಿ ಭತ್ತ ಮತ್ತು ರಾಗಿ ಖರೀದಿಸಲು ಜಿಲ್ಲೆಯ ರೈತರಿಂದ ನೋಂದಣಿಗೆ ಆಹ್ವಾನಿಸಲಾಗಿದೆ.ರೈತರು ಬೆಳೆದ ಉತ್ತಮ ಗುಣಮಟ್ಟದ ರಾಗಿ ಮತ್ತು ಭತ್ತ ನೇರವಾಗಿ ನೋಂದಾಯಿತ ರೈತರಿಂದ ಖರೀದಿಸಲು ಜಿಲ್ಲಾ ಆಹಾರ ಮತ್ತು ನಾಗರಿಕ ಸರಬರಾಜು ನಿಗಮವನ್ನು ಖರೀದಿ ಏಜೆನ್ಸಿಯನ್ನಾಗಿಸಿದ್ದು, ರೈತರು ತಾವು ಬೆಳೆದ ಭತ್ತ ಮತ್ತು ರಾಗಿಯ ಗುಣಮಟ್ಟವನ್ನು ಆಯಾ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣದಲ್ಲಿ ಪರಿಶೀಲಿಸಬೇಕು. ನಂತರ ರೈತರು ಕೃಷಿ ಇಲಾಖೆ ನೀಡಿರುವ ಫ್ರೂಟ್ಸ್ ಗುರುತಿನ ಸಂಖ್ಯೆಯೊಂದಿಗೆ ನೋಂದಣಿ ರಾಗಿ ಪ್ರತಿ ಕ್ವಿಂಟಲ್‌ಗೆ ರೂ. 3,846 ಮತ್ತು ಭತ್ತ ಪ್ರತಿ ಕ್ವಿಂಟಲ್‌ಗೆ ಸಾಮಾನ್ಯ ರೂ. 2,183, ಗ್ರೇಡ್–ಎ ಗೆ ರೂ. 2,203 ಗಳ ಕನಿಷ್ಟ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ರೈತರ ನೋಂದಣಿ ಪ್ರಕ್ರಿಯೆಯು ಕಡ್ಡಾಯವಾಗಿದ್ದು,ರಾಗಿ ಪ್ರತಿ ಕ್ವಿಂಟಲ್‌ಗೆ ರೂ. 3,846 ಮತ್ತು ಭತ್ತ ಪ್ರತಿ ಕ್ವಿಂಟಲ್‌ಗೆ ಸಾಮಾನ್ಯ ರೂ. 2,183, ಗ್ರೇಡ್–ಎ ಗೆ ರೂ. 2,203 ಗಳ ಕನಿಷ್ಟ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ರೈತರ ನೋಂದಣಿ ಪ್ರಕ್ರಿಯೆಯು ಕಡ್ಡಾಯವಾಗಿರುತ್ತದೆ. . ಫ್ರೂಟ್ಸ್ ದತ್ತಾಂಶದಲ್ಲಿ ರೈತರು ನೀಡಿರುವ ಬ್ಯಾಂಕ್ ಖಾತೆ ಸಂಖ್ಯೆಗೆ ಆಃಖಿ ಮುಖಾಂತರ ನೇರವಾಗಿ ರೈತರ ಖಾತೆಗೆ ಹಣ ಸಂದಾಯ ಮಾಡಲಾಗುವುದು ಆದ್ದರಿಂದ ರೈತರು 'ಫ್ರೂಟ್ಸ್' ದತ್ತಾಂಶದಲ್ಲಿ ದಾಖಲಿಸಿರುವ ತಮ್ಮ ಬ್ಯಾಂಕ್ ಖಾತೆಯನ್ನು ಆಧಾರ್ ಸಂಖ್ಯೆಯೊಂದಿಗೆ ಜೋಡಣೆ ಆಗಿರುವುದನ್ನು ಮತ್ತು ಎನ್‌ಪಿಸಿಐ(ಓಕಅಖ) ಮ್ಯಾಪಿಂಗ್ ಆಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಹಾಗೂ ಖರೀದಿ ಕೇಂದ್ರಕ್ಕೆ ಆಧಾರ್ ಕಾರ್ಡ್ ಮತ್ತು ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆಯನ್ನು ನೀಡಬೇಕು. ರಾಗಿ ತಂದು ಖರೀದಿ ಕೇಂದ್ರದಲ್ಲಿ ರಾಶಿ ಹಾಕಬೇಕು. ರಾಗಿ ಗುಣಮಟ್ಟ ಪರಿಶೀಲಿಸಲು ಕೃಷಿ ಇಲಾಖೆಯಿಂದ ನೇಮಿಸಲ್ಪಟ್ಟ ಗುಣಮಟ್ಟ ಪರೀಕ್ಷಕರು ದಾಸ್ತಾನಿನ ಗುಣಮಟ್ಟವನ್ನು ಪರಿಶೀಲಿಸಿ ಉತ್ತಮ ಗುಣಮಟ್ಟವೆಂದು (ಎಫ್.ಎ.ಕ್ಯೂ) ಧೃಢಪಟ್ಟರೆ ಮಾತ್ರ ಖರೀದಿಸಲಾಗುವುದು. ಗುಣಮಟ್ಟ ಸರಿಯಿಲ್ಲವೆಂದು ದೃಢಪಡಿಸಿದ್ದಲ್ಲಿ ರೈತರು ತಮ್ಮ ಸ್ವಂತ ಖರ್ಚಿನಿಂದ ಹಿಂದಕ್ಕೆ ತೆಗೆದುಕೊಂಡು ಹೋಗಬೇಕು. ರೈತರಿಂದ ಪ್ರತಿ ಎಕರೆಗೆ ರಾಗಿ 10.00ಕ್ವಿಂಟಲ್ ನಂತೆ ರೈತರು ಹೊಂದಿರುವ ಜಮೀನಿಗೆ ಅನುಗುಣವಾಗಿ ಖರೀದಿಸಲಾಗುವುದು.ಹಾಗೂ ರೈತರಿಂದ ಭತ್ತವನ್ನು ಪ್ರತಿ ಎಕರೆಗೆ ಭತ್ತ 25 ಕ್ವಿಂಟಲ್ ನಂತೆ ಗರಿಷ್ಠ 40 ಕ್ವಿಂಟಾಲ್ ಖರೀದಿಸಲಾಗುವುದು. ರೈತರು ತರುವ ರಾಗಿ ಮತ್ತು ಭತ್ತದ ಎಲ್ಲಾ ಚೀಲಗಳನ್ನು ಖರೀದಿ ಕೇಂದ್ರಗಳಲ್ಲಿ ಒಂದಾಗಿ ಪರಿಶೀಲಿಸುವುದರಿಂದಾಗಿ ರೈತರು ತಾವು ತರುವ ಪದಾರ್ಥಗಳು ಒಂದೇ ತರಹದ್ದಾಗಿರಬೇಕು. ಒಂದು ವೇಳೆ ಗುಣಮಟ್ಟದಲ್ಲಿ ಯಾವುದೇ ನ್ಯೂನತೆ ಕಂಡುಬಂದಲ್ಲಿ ಸಂಪೂರ್ಣ ಪ್ರಮಾಣವನ್ನು ತಿರಸ್ಕರಿಸಲಾಗುವುದು.

# ಊರಿಗೆ ಓರ್ವ ಜಂಗಮನಿದ್ದರೆ ಊರೇ ಪಾವನ

» **ಚಿತ್ರದುರ್ಗ**

ಮಹಿಳೆಯರಿಗೆ ಮಾಂಗಲ್ಯ ಎಷ್ಟು ಮುಖ್ಯವೇ ಅಷ್ಟೇ ಪ್ರಮಾಣದಲ್ಲಿ ಪುರುಷರಿಗೆ ದೇಹದ ಮೇಲೆ ಲಿಂಗ ಪ್ರತಿಷ್ಠಾಪನೆ ಅಗತ್ಯವಾಗಿದೆ. ಯುವ ಜನಾಂಗಕ್ಕೆ ಲಿಂಗ ದೀಕ್ಷೆ ನೀಡುವುದರ ಮೂಲಕ ಮುಂದಿನ ದಿನಮಾನದಲ್ಲಿ ಉತ್ತಮವಾದ ಭವಿಷ್ಯವನ್ನು ಕಾಣಬಹುದಾಗಿದೆ ಎಂದು ನೊಣವಿನಕೆರೆಯ ಶ್ರೀ ಸೋಮೇಕಟ್ಟೆ ಕಾಡಸಿದ್ದೇಶ್ವರ ಮಠ ಮತ್ತು ತುರವೇಕೆರೆಯ ವಿರಕ್ತ ಮಠದ ಡಾ.ಶಿವಾನುಭವಚರವರ್ಯ ಕರಿವೃಷಭದೇಶಿಕೇಂದ್ರ ಶಿವಯೋಗಿಶ್ವರ ಸ್ವಾಮೀಜಿ ತಿಳಿಸಿದರು.

ನಗರದ ವಿದ್ಯಾ ವಿಕಾಸ ವಿದ್ಯಾ ಸಂಸ್ಥೆಯ ಆವರಣದಲ್ಲಿ ಬೇಡ ಜಂಗಮ ಸಮಾಜದಿಂದ ಹಮ್ಮಿಕೊಂಡಿದ್ದ ವೀರಶೈವ ವೀರಮಹೇಶ್ವರ ಜಂಗಮ ವಟುಗಳಿಗೆ ಉಚಿತ ಶಾಸ್ತ್ರೋಕ್ತ ದೀಕ್ಷೆ ಹಾಗೂ ಧರ್ಮ ಸಭೆಯ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಬೇಡ ಜಂಗಮ ಸಮಾಜ ಪ್ರತಿ ವರ್ಷ ಈ ರೀತಿಯಾದ ದೀಕ್ಷಾ ಕಾರ್ಯಕ್ರಮವನ್ನು ಮಾಡುವುದರ ಮೂಲಕ ಜಂಗಮ ಸಮಾಜವನ್ನು ಪ್ರಗತಿಯತ್ತ ಕೊಂಡ್ಯೂಯಲಾಗುತ್ತಿದೆ. 2013ರಲ್ಲಿ ಚಿತ್ರದುರ್ಗದಲ್ಲಿ ಪ್ರಾರಂಭವಾದ ಈ ಕಾರ್ಯಕ್ರಮ ನಿರಂತರವಾಗಿ ನಡೆಯುತ್ತಾ ಬಂದಿದೆ. ಈ ರೀತಿಐಆದ ಕಾರ್ಯಕ್ರಮಗಳು ಇತ್ತೀಚಿನ ದಿನಮಾನದಲ್ಲಿ ಕಡಿಮೆಯಾಗಿದೆ, ಇವುಗಳು ಹೆಚ್ಚಾಗಬೇಕಿದೆ ಆಗ ಮಾತ್ರ ಜಂಗಮ ಸಮಾಜ ಹೆಚ್ಚಾಗಿ ಬೆಳೆಯಲು ಸಾಧ್ಯವಿದೆ ಎಂದರು.

ಇಂದಿನ ದಿನಮಾನದಲ್ಲಿ ಲಿಂಗ ಪೂಜೆ ಸರಿಯಾದ ರೀತಿಯಲ್ಲಿ ನಡೆಯುತ್ತಿಲ್ಲ, ಇದರಿಂದ ದೀಕ್ಷಾ ಪಟುಗಳಿಗೆ ಈ ರೀತಿಯಾದ ದೀಕ್ಷೆಯನ್ನು ನೀಡುವುದರ ಮೂಲಕ ಮುಂದಿನ ದಿನದಲ್ಲಿ ಉತ್ತಮ ಜಂಗಮರನ್ನಾಗಿ ಮಾಡಬಹುದಾಗಿದೆ.

ವೀರಶೈವ ಪದ್ದತಿ ಜೀವಾತ್ಮತವಾಗಬೇಕಿದೆ. ವೇದ ಪಾಠಶಾಲೆಗಳನ್ನು ಪ್ರಾರಂಭ ಮಾಡುವುದರ ಮೂಲಕ ಜಂಗಮ ಸಮುದಾಯವನ್ನು ಮುನ್ನೆಡೆಸಬೇಕಿದೆ. ಜಂಗಮರು ಸಂಘಟನೆಯಾಗಬೇಕಿದೆ. ಇವರು ಒಂದು ರೀತಿಯಲ್ಲಿ ಆಲದ ಮರ ಇದ್ದಂತೆ ಎಲ್ಲರಿಗೂ ಸಹಾ ಆಶ್ರಯವನ್ನು ನೀಡುತ್ತಾರೆ. ಭಸ್ಮ, ಮಂತ್ರ, ಪೂಜೆ, ಶಿವನ ಆರಾಧನೆ, ಗುರು ಕಾರುಣ್ಯ ಜಂಗಮದ ಮೂಲ ಮಂತ್ರವಾಗಿದೆ ಎಂದು ತಿಳಿಸಿದರು.

ವೀರಶೈವರಲ್ಲಿ ಜನನ ಮತ್ತು ಮರಣದಲ್ಲಿಯೂ ಸಹಾ ಜಂಗಮರ ಅಗತ್ಯ ಇದೆ. ಹುಟ್ಟುವಾಗಲೂ ಸಹಾ ಜಂಗಮರಿಲ್ಲದೆ ನಡೆಯುವುದಿಲ್ಲ ಅದೇ ರೀತಿ ಸಾವಿನಲ್ಲಿಯೂ ಸಹಾ ಜಂಗಮದ ಪಾದ ಇಲ್ಲದೆ ಪೂರ್ಣವಾಗುವುದಿಲ್ಲ, ಇದರಿಂದ ಜಂಗಮರ ಸ್ಥಾನ ಉನ್ನತವಾಗಿದೆ. ಊರಿಗೆ ಓರ್ವ ಜಂಗಮನಿದ್ದರೆ ಊರೇ ಪಾವನವಾಗುತ್ತದೆ. ಎಲ್ಲರಿಗೂ ಉಪದೇಶವನ್ನು ನೀಡುವುದರ ಮೂಲಕ ಸಮಾಜವನ್ನು ಉದ್ದಾರ ಮಾಡುತ್ತಾರೆ ಎಂದು ಹೇಳಿದರು.

ರಟ್ಟೆಹಳ್ಳಿ ಕಬ್ಬಿಣಕಂಥಿ ಮಠದ ಶ್ರೀ ಶಿವಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಮಾನವನ ಬದುಕು ಧರ್ಮ ಸಂಸ್ಕಾರದಲ್ಲಿ ಹಾಸು ಹೊಕ್ಕಾಗ ಬೇಕಿದೆ. ಇಂದಿನ ದಿನಮಾನದಲ್ಲಿ ಭಗವಂತ ನಮ್ಮ ಬೇಡಿಕೆಯನ್ನು ಈಡೇರಿಸದಿದ್ದರೂ ಸಹಾ ಪೂಜೆ ಮಾಡುವುದನ್ನು ಮಾತ್ರ ಬಿಟ್ಟಿಲ್ಲ. ನಮ್ಮೆಲ್ಲರ ಬದುಕಿನಲ್ಲಿ ಧರ್ಮ ಹಾಸು ಹೊಕ್ಕಾಗಿದೆ. ಧರ್ಮವನ್ನು ಬಿಟ್ಟು ಬದುಕಲಿಕ್ಕೆ ಸಾಧ್ಯವಿಲ್ಲ. ಪ್ರತಿ ದಿನ ಸ್ನಾನ ಮಾಡಿ ಪೂಜೆಯನ್ನು ಮಾಡಿದ ನಂತರ ಪ್ರಸಾದವನ್ನು ಸ್ವೀಕಾರ ಮಾಡುವಮತೆ ಆಗಬೇಕಿದೆ ಆಗ ಮಾತ್ರ ಉತ್ತಮ ಸಂಸ್ಕಾರವನ್ನು ಹೊಂದಲು ಸಾಧ್ಯವಿದೆ ಎಂದರು.

ಮಾನವನಿಗೆ ಪಾರಮಾರ್ಥ ಮತ್ತು ಲೌಕಿಕ ಬದುಕು ಸಹಾ ಅಗತ್ಯವಾಗಿದೆ. ನಾವು ಮಾಡುವ ಕಾಯಕದಲ್ಲಿ ಭಗವಂತನನ್ನು ಕಾಣಬೇಕಿದೆ. ಮಾಡುವ ಕೆಲಸದಲ್ಲಿ ಆನಂದವನ್ನು ಕಾಣಬೇಕಿದೆ. ಇದರ ಮೂಲಕ ಭಗವಂತನನ್ನು ಸಾಕ್ಷಾತ್ಕಾರ ಮಾಡಿಕೊಳ್ಳಬೇಕಿದೆ. ಭಗವಂತನನ್ನು ನಮ್ಮ ಹೃದಯದಲ್ಲಿ ಸ್ಥಾಪಿಸಿಕೊಳ್ಳಬೇಕಿದೆ ಆಗ ಆತ ಅಲ್ಲಿಂದ ಹೊರ ಹೋಗಲು ಸಾಧ್ಯವಿಲ್ಲ, ಜಂಗಮರಾದವರು ಬೇರೆಯವರ ಬದುಕಿಗೆ ಸಂಸ್ಕಾರವನ್ನು ನೀಡುವಂತ ಕಾರ್ಯವನ್ನು ಮಾಡಬೇಕಿದೆ ಎಂದು ಕರೆ ನೀಡಿದರು.

ಮಾಜಿ ಶಾಸಕ ಎಸ್.ಕೆ.ಬಸವರಾಜನ್, ಜಿಲ್ಲಾ ಬೇಡ ಜಂಗಮ ಸಮಾಜದ ಅಧ್ಯಕ್ಷ ಎಂ.ಟಿ.ಮಲ್ಲಿಕಾರ್ಜನಸ್ವಾಮಿ, ಬೇಡಜಂಗಮ ಸಮಾಜದ ಅಧ್ಯಕ್ಷ ಕೆ.ಎಂ.ವಿರೇಶ್, ಶಿವನಗೌಡ, ನಗರಸಭೆ ಸದಸ್ಯ ಸುರೇಶ್, ಕೆ.ಸಿ.ರುದ್ರೇಶ್, ಕೆ.ಎನ್.ವಿಶ್ವನಾಥಯ್ಯ, ಚನ್ನಯ್ಯ ಶಶಿಧರ್ ಬಾಬು, ಕರಿಬಸಯ್ಯ ಭಾಗವಹಿಸಿದ್ದರು.

ರೇವಣಸಿದ್ದಯ್ಯ ಮತ್ತು ಸಂಗಡಿಗರು ವೇದ ಘೋಷ ಮಾಡಿದರೆ ಕು.ಬಿಂದುಶ್ರೀ ಪ್ರಾರ್ಥಿಸಿದರೆ, ವಿದ್ಯಾ ವಿಕಾಸ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ವಿಜಯಕುಮಾರ್ ಸ್ವಾಗತಿಸಿದರು, ಜಿಲ್ಲಾ ಬೇಡ ಜಂಗಮ ಸಮಾಜದ ಪ್ರಧಾನ ಕಾರ್ಯದರ್ಶಿ ಎಸ್.ಷಡಾಕ್ಷರಯ್ಯ ಪ್ರಾಸ್ತಾವಿಕವಾಗಿ ಮಾತನಾಡಿದರು, ಶಿಕ್ಷಕರಾದ ಮಂಜುನಾಥ ವಂದಿಸಿದರು. ಸಿ.ಹೆಚ್.ಆಶಾ ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ತಾಲ್ಲೂಕಿನ ವಿವಿಧ ಕಡೆಗಳಿಂದಾ ಅಗಮಿಸಿದ್ದ 28 ವಟುಗಳಿಗೆ ದೀಕ್ಷೆಯನ್ನು ಇಂದು ಬೆಳಿಗ್ಗೆ ನಡೆದ ಕಾರ್ಯಕ್ರಮದಲ್ಲಿ ಶ್ಯಾಸ್ತ್ರೋಕ್ತ ದೀಕ್ಷೆಯನ್ನು ನೀಡಲಾಯಿತು. ಇದೇ ಸಮಯದಲ್ಲಿ 2024ರ ದಿನದರ್ಶಿಕೆಯನ್ನು ಸಹಾ ಉಭಯ ಶ್ರೀಗಳು ಬಿಡುಗಡೆ ಮಾಡಿದರು.



## ಗಾಂಧಿನಗರ ತಿಮ್ಮಪ್ಪಸ್ವಾಮಿ ದೇವಸ್ಥಾನಕ್ಕೆ ಶಾಸಕ ಟಿ.ರಘುಮೂರ್ತಿ ಭೇಟಿ: ಪೂಜಾ ಕಾರ್ಯದಲ್ಲಿ ಬಾಗಿ

» **ಚಳ್ಳಕೆರೆ**

ಇಲ್ಲಿನ ಗಾಂಧಿನಗರದ ಶ್ರೀತಿಮ್ಮಪ್ಪಸ್ವಾಮಿ ದೇವಸ್ಥಾನಕ್ಕೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಭೇಟಿ ನೀಡಿ ಪೂಜಾ ಕಾರ್ಯದಲ್ಲಿ ಪಾಲ್ಗೊಂಡರು. ಪ್ರತಿವರ್ಷ ದೇವಸ್ಥಾನದ ಆಡಳಿತ ಮಂಡಳಿ ಈ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಸುತ್ತಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ದೇವಸ್ಥಾನದ ಅಭಿವೃದ್ಧಿ ಕುರಿತಂತೆ ಯಾವುದೇ ಸಮಸ್ಯೆ ಇದ್ದರೆ ಮಾಹಿತಿ ನೀಡಿದರೆ ಸರ್ಕಾರದಿಂದ ಸ್ಪಂದಿಸುವ ಭರವಸೆ ನೀಡಿದರು. ಪೂಜಾ ಕಾರ್ಯದಲ್ಲಿ ಸುತ್ತಮುತ್ತಲ ನೂರಾರು ಭಕ್ತರು ಪಾಲ್ಗೊಂಡಿದ್ದರು. ಅರ್ಚಕರಾದ ಪ್ರದೀಪ್‌ಶರ್ಮ, ಪ್ರವೀಣ್‌ಶರ್ಮ, ಸವ್ಯಸಾಚಿ, ಚನ್ನಕೇಶವಮೂರ್ತಿ, ತಿಪ್ಪೇರುದ್ರಪ್ಪ, ನಿವೃತ್ತ ಶಿಕ್ಷಕ ವಿ.ತಿಮ್ಮಣ್ಣ ಮುಂತಾದವರು ಉಪಸ್ಥಿತರಿದ್ದರು.



## ವಿವಿಧ ಬೇಡಿಕೆ ಈಡೇರಿಕೆಗಾಗಿ 1 ದಿನದ ಉಪವಾಸ ಸತ್ಯಾಗ್ರಹ

» **ಚಿತ್ರದುರ್ಗ**

ರಾಷ್ಟ್ರೀಯ ಈಡಿಗ ಮಹಾ ಮಂಡಳಿವತಿಯಿಂದ ಸಮಾಜದ ವಿವಿಧ ಬೇಡಿಕೆ ಈಡೇರಿಕೆಗಾಗಿ ಒಂದು ದಿನದ ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದೆ ಎಂದು ಈಡಿಗ ಸಮಾಜದ ಅಧ್ಯಕ್ಷರಾದ ಸಿ.ತಿಪ್ಪೇಸ್ವಾಮಿ ತಿಳಿಸಿದ್ದಾರೆ.

ಚಿತ್ರದುರ್ಗ ನಗರದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಧಿಕಾರಕ್ಕೆ ಬಂದ ಮೇಲೆ ನಮ್ಮ ಸಮುದಾಯವನ್ನು ನಿರ್ಲಕ್ಷ ಮಾಡಿದೆ. ನಮ್ಮ ಸಮಾಜದ ಜನತೆಯ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ರಾಜಕೀಯ ಶಕ್ತಿಗೋಸ್ಕರ ಸಮಾಜದವರಲ್ಲಿ ಜಾಗೃತಿಯನ್ನು ಮೂಡಿಸುವ ಸಲುವಾಗಿ ಉಪವಾಸ ಸತ್ಯಾಗ್ರಹವನ್ನು ಡಿ.22 ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ನಮ್ಮ ಸಮಾಜದ ಗುರುಗಳಾದ ಶ್ರೀ ಪ್ರಣವಾನಂದ ಶ್ರೀಗಳ ಸಮ್ಮುಖದಲ್ಲಿ ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದರು. ಕಳೆದ ಬಾರಿ ಬೆಂಗಳೂರಿನಲ್ಲಿ ನಡೆದ ಸಮಾವೇಶದಲ್ಲಿ ಭಾಗವಹಿಸಿದ್ದ ರಾಜ್ಯದ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ನಮ್ಮ ಸಮುದಾಯದ ಬಗ್ಗೆ ಬರೀ ಭಾಷಣವನ್ನು ಮಾಡಿದರೇ ವಿನಹ ಯಾವುದೇ ರೀತಿಯ ಆರ್ಥಿಕ ಸಹಾಯವನ್ನು ಮಾಡುವ ಬಗ್ಗೆ ಭರವಸೆಯನ್ನು ಸಹಾ ನೀಡಲಿಲ್ಲ, ಇದರಿಂದ ಈಡಿಗ ಸಮಾಜಕ್ಕೆ ಪ್ರತಿ ಬಾರಿಯೂ ಅನ್ಯಾಯವಾಗುತ್ತಿದೆ. ಚುನಾವಣೆಯ ಕಾಂಗ್ರೆಸ್ ಪ್ರನಾಳಿಕೆಯಲ್ಲಿ ನಾರಾಯಣ ನಿಗಮಕ್ಕೆ 250 ಕೋಟಿ ರೂ.ಗಳನ್ನು ನೀಡುವುದಾಗಿ ಹೇಳಿದ್ದರು ಆದರೆ ಇಲ್ಲಿಯವರೆಗೂ ಸರ್ಕಾರದಿಂದ ಯಾವುದೇ ರೀತಿಯ ಅನುಕೂಲಗಳು ಬಂದಿಲ್ಲ ಎಂದು ತಿಪ್ಪೇಸ್ವಾಮಿ ದೂರಿದರು.

ಈ ಹಿನ್ನಲೆಯಲ್ಲಿ ಡಿ.22ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಒಂದು ದಿನದ ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದ್ದು, ಸಮಾಜದ ಗುರುಗಳಾದ ಶ್ರೀ ಪ್ರಣವಾನಂದ ಶ್ರೀಗಳು ನೇತೃತ್ವವನ್ನು ವಹಿಸಲಿದ್ದಾರೆ. ಅಂದಿನ ಈ ಕಾರ್ಯಕ್ರಮಕ್ಕೆ ಈಡಿಗ ಸಮಾಜದ ಭಾಂದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವುದುದರ ಮೂಲಕ ಸತ್ಯಾಗ್ರಹವನ್ನು ಯಶಸ್ವಿ ಮಾಡುವಂತೆ ಮನವಿ ಮಾಡಿದ್ದಾರೆ.

ಗೋಷ್ಟಿಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮನು, ಜಿಲ್ಲಾ ಮಹಿಳಾ ಅಧ್ಯಕ್ಷರಾದ ಶ್ರೀಮತಿ ಉಮಾದೇವಿ, ಜಿಲ್ಲಾ ಉಪಾಧ್ಯಕ್ಷರಾದ ರಮೇಶ್, ಮುಖಂಡರಾದ ಶ್ರೀನಿವಾಸ್, ಪ್ರಕಾಶ್ ಭಾಗವಹಿಸಿದ್ದರು.



## ಮಾನವ ಹಕ್ಕುಗಳ ಬಗ್ಗೆ ಕಾನೂನು ಅರಿವು-ನೆರವು ಕಾರ್ಯಕ್ರಮ

### ವ್ಯಕ್ತಿಯು ಘನತೆ, ಗೌರವ, ಸಮಾನತೆಯಿಂದ ಬದುಕಲು ಮಾನವ ಹಕ್ಕು ಸಹಕಾರಿ




» **ಚಿತ್ರದುರ್ಗ**

ಪ್ರತಿಯೊಬ್ಬ ವ್ಯಕ್ತಿಯು ಸಮಾಜದಲ್ಲಿ ಘನತೆ, ಗೌರವ ಹಾಗೂ ಸಮಾನತೆಯಿಂದ ಬದುಕಲು ಮಾನವ ಹಕ್ಕುಗಳು ತುಂಬಾ ಸಹಕಾರಿಯಾಗಿವೆ ಎಂದು ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿಜೆಎಂ ಕೆಂಪರಾಜು ಹೇಳಿದರು. ನಗರದ ಧವಳಗಿರಿ ಬಡಾವಣೆಯ ಸರ್ಕಾರಿ ಮೆಟ್ರಿಕ್ ನಂತರ ಕಾನೂನು ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಮಾನವ ಹಕ್ಕುಗಳ ಬಗ್ಗೆ ಕಾನೂನು ಅರಿವು–ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಮಾನವ ಸಂಘ ಜೀವಿ. ಅವನು ಸಮಾಜ ಹಾಗೂ ಸಮುದಾಯ ಬಿಟ್ಟು ಬದುಕಲಾರ. ಸಮಾಜದಲ್ಲಿ ವ್ಯಕ್ತಿಯು ಇನ್ನೊಬ್ಬ ವ್ಯಕ್ತಿಗೆ ಅಥವಾ ಜೀವಿಗೆ ಆಗಲಿ ತಾರತಮ್ಯ ಮಾಡದೆ ಪರಸ್ಪರ ಗೌರವ ನೀಡಬೇಕು. ಸಂವಿಧಾನಾತ್ಮಕವಾಗಿರುವ ಮೂಲಭೂತ ಹಕ್ಕುಗಳ ರಕ್ಷಣೆ ಜೊತೆಗೆ ಮೂಲಭೂತ ಕರ್ತವ್ಯಗಳನ್ನೂ ಪಾಲಿಸಬೇಕು. ವಿಶ್ವಸಂಸ್ಥೆ ಜಾರಿಯಾದ ದಿನದಿಂದಲೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಮಾನವ ಹಕ್ಕುಗಳ ಬಗ್ಗೆ ಅರಿವು ಮೂಡಿಸಿಕೊಂಡು ಬರುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಎಂ.ಗಂಗಾಧರ್ ಸೇರಿದಂತೆ ಪದವಿ, ಕಾನೂನು ಹಾಗೂ ಬಿ.ಇಡಿ ವಿದ್ಯಾರ್ಥಿಗಳು ಇದ್ದರು.

**ಪ್ರಮುಖ ಸುದ್ದಿ**

# ನವಯಾನ ಬುದ್ಧ ಧಮ್ಮ ನೂರನೆ ಸರಣಿ ಕಾರ್ಯಕ್ರಮ

» **ಚಿತ್ರದುರ್ಗ**

ನವಯಾನ ಬುದ್ಧ ಧಮ್ಮದಂತೆ ಎಲ್ಲರೂ ನಡೆದರೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಅಸಮಾನತೆ ನಿವಾರಣೆಯಾಗಲಿದೆ ಎಂದು ಸಾಮಾಜಿಕ ಸಂಘರ್ಷ ಸಮಿತಿಯ ರಾಜ್ಯಾಧ್ಯಕ್ಷ ಪ್ರೊ.ಸಿ.ಕೆ.ಮಹೇಶ್ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಕಿಸಾನ್ ಮೋರ್ಚ ಅಧ್ಯಕ್ಷ, ಮಡಿವಾಳ ಸಮಾಜದ ಶಿವಲಿಂಗಪ್ಪನವರ ವಿದ್ಯಾನಗರದಲ್ಲಿರುವ ನಿವಾಸದಲ್ಲಿ ಭಾನುವಾರ ನಡೆದ ನವಯಾನ ಬುದ್ಧ ಧಮ್ಮ ಸಂಘ, ಡಾ.ಬಿ.ಆರ್.ಅಂಬೇಡ್ಕರ್ ನವಯಾನ ನೂರನೆ ಸರಣಿ ಕಾರ್ಯಕ್ರಮದಲ್ಲಿ ಬುದ್ಧನ ವಿಗ್ರಹಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ನವಯಾನ ಬುದ್ಧ ಧಮ್ಮ, ಸಂವಿಧಾನದಲ್ಲಿ ಏಕತೆಯಿದೆ. ಅದಕ್ಕಾಗಿಯೇ ಡಾ.ಬಿ.ಆರ್.ಅಂಬೇಡ್ಕರ್ ಹಿಂದೂ ಧರ್ಮವನ್ನು ತೊರೆದು ಭೌದ್ಧ ಧರ್ಮಕ್ಕೆ ಸೇರ್ಪಡೆಗೊಂಡರು.

ಮಡಿವಾಳ ಮಾಚಿ ದೇವರು ಇದ್ದಿದ್ದರಿಂದಲೆ ವಚನ ಚಳುವಳಿ ಉಳಿದಿದೆ. ಬುದ್ಧನ ತಾತ್ವಿಕ ನಿಲುವನ್ನು ವಚನಕಾರರು ಮಾತಿನ ಕ್ರಿಯೆಯಲ್ಲಿ ಪಾಲಿಸಿದ್ದಾರೆ. ಹಿಂದುಳಿದ ವರ್ಗದವರು, ಶೋಷಿತರು, ದಲಿತರು ತಮ್ಮ ಜನಾಂಗದ ಇತಿಹಾಸ ಗೊತ್ತಿಲ್ಲದ ಕಾರಣಕ್ಕಾಗಿಯೇ ಇನ್ನು ಸಮಾಜದ ಮುಖ್ಯವಾಹಿನಿಗೆ ಬರಲು ಆಗುತ್ತಿಲ್ಲ. ಹಿಂಸೆಯನ್ನು ವಿರೋಧಿಸುತ್ತಿದ್ದ ಬುದ್ಧನ ಪಂಚಶೀಲ ತತ್ವಗಳು ಕೇವಲ ಒಲೆ ಮಾದಿಗರಿಗಷ್ಟೆ ಮೀಸಲಲ್ಲ. ಇಡಿ ಮನುಕುಲಕ್ಕೆ ಅನ್ವಯವಾಗುತ್ತದೆ. ಹಿಂದೂ ಧರ್ಮದಲ್ಲಿ ಪ್ರಾಣಿ ಬಲಿ ನಿಲ್ಲಿಸಿ ಎನ್ನುವ ಮಾತಿಲ್ಲ. ಹಿಂಸೆಯ ವಿರುದ್ದ ಮೊಟ್ಟ ಮೊದಲು ಮಾತನಾಡಿದ್ದೆ ಗೌತಮ ಬುದ್ದ ಎನ್ನುವುದನ್ನು ಪ್ರತಿಯೊಬ್ಬರು ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದರು.

ಧಮ್ಮ ಬುದ್ಧ ಧರ್ಮ ಬೇರೆ ಧರ್ಮಕ್ಕಿಂತ ಭಿನ್ನವಾದುದು. ಲಿಂಗಾಯಿತ ಧರ್ಮದಲ್ಲಿನ ಎಲ್ಲಾ ಜಾತಿಯವರು ಮೂಲತಃ ಬುದ್ದಿಷ್ಟ್‌ಗಳೆ. ಬುದ್ಧ ಧರ್ಮ ವ್ಯಾಪಕವಾಗಿ ಎಲ್ಲಾ ಕಡೆ ಹರಡುತ್ತಿರುವುದು ಯಜ್ಞ ಯಾಗಾಧಿಗಳಲ್ಲಿ ತೊಡಗಿರುವವರಿಗೆ ಭಯವುಂಟಾಗಿದೆ. ಬುದ್ಧ ಧಮ್ಮ ಎಲ್ಲಾ ಶೋಷಿತ ಜಾತಿಗಳ ಧಮ್ಮ. ನವಯಾನ ಬುದ್ಧ ಧಮ್ಮದಲ್ಲಿ ಗ್ರಂಥವಿದೆ. ಓದಿಕೊಂಡು ಬುದ್ಧ ಧಮ್ಮದ ಒಳಗಡೆ ಎಲ್ಲರೂ ಸಾಗೋಣ ಎಂದರು.

ನಿವೃತ್ತ ಪ್ರಾಚಾರ್ಯರಾದ ಡಾ.ವಿ.ಬಸವರಾಜ್ ಮಾತನಾಡಿ ಹಿಂದುಳಿದವರು, ದಲಿತರು, ಶೋಷಿತರು ಇನ್ನು ಪ್ರಜ್ಞಾವಸ್ಥೆಗೆ ತಲುಪಿಲ್ಲ ಎನ್ನುವುದನ್ನು ಒಪ್ಪಿಕೊಳ್ಳಲೇಬೇಕು. ನವಯಾನ ಬುದ್ಧ ಧಮ್ಮದ ದಾರಿಯಲ್ಲಿ ಎಲ್ಲರೂ ಸಾಗಿದಾಗ ಶೋಷಿತ ಸಮುದಾಯ, ಹಿಂದುಳಿದವರ ವಿಮೋಚನೆ ಸಾಧ್ಯ. ಯಾವುದೋ ಆಸೆ ಆಮಿಷಗಳಿಂದ ಇನ್ನು ಹೊರಬಂದಿಲ್ಲ. ಸಂವಿಧಾನವೇ ಹಿಂದುಳಿದವರಿಗೆ ಅರ್ಥವಾಗಿಲ್ಲ. ಸಾಮಾಜಿಕ ಕ್ರಾಂತಿಯಾಗಬೇಕಾಗಿರುವುದರಿಂದ ಹಿಂದುಳಿದ ವರ್ಗಗಳ ಮನೆಯಲ್ಲಿ ಇಂತಹ ಕಾರ್ಯಕ್ರಮಗಳು ಹೆಚ್ಚು ಹೆಚ್ಚಾಗಿ ನಡೆಯಬೇಕು. ಮಡಿವಾಳ ಸಮಾಜದ ಶಿವಲಿಂಗಪ್ಪನವರ ನಿವಾಸದಲ್ಲಿ ನವಯಾನ ಬುದ್ಧ ಧಮ್ಮ ನೂರನೆ ಸರಣಿ ಕಾರ್ಯಕ್ರಮ ನಡೆಯುತ್ತಿರುವುದು ತುಂಬಾ ಸಂತೋಷದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬುದ್ಧ ಎಂದರೆ ಎಚ್ಚರದ ಸ್ಥಿತಿ. ಬುದ್ಧನನ್ನು ಎಲ್ಲರೂ ಆರಾಧನೆ ಮಾಡಬೇಕಿದೆ. ದುಃಖ, ನೋವು, ಅತಿಯಾಸೆಯಿಂದ ಮಾನವ ಹೊರಬರಬೇಕೆಂದು ಬುದ್ಧ ಹೇಳಿದ್ದಾನೆ. ಬುದ್ಧನ ಮಾರ್ಗದಲ್ಲಿ ಸಾಗಿದಾಗ ನಿಜವಾದ ಶಕ್ತಿ ಬರುತ್ತದೆ ಎಂದು ಹೇಳಿದರು.

ಲೇಖಕ ಹೆಚ್.ಆನಂದ್‌ಕುಮಾರ್ ಮಾತನಾಡುತ್ತ ಗೌತಮ ಬುದ್ಧ ಅವ್ವ ಸಂಸ್ಕೃತಿಯನ್ನು ಎತ್ತಿಹಿಡಿದರು. ಎಲ್ಲರನ್ನು ಅಪ್ಪಿಕೊಳ್ಳುವ ಸಂಸ್ಕೃತಿ ಅವರದು. ಮಹಿಳೆಯರನ್ನು ಪೂಜ್ಯ ಗೌರವದಿಂದ ಕಾಣಬೇಕೆಂಬುದು ಅವರ ಆಸೆಯಾಗಿತ್ತು. ಹಿಂಸೆಯನ್ನು ಸದಾ ವಿರೋಧಿಸುತ್ತಿದ್ದ ಬುದ್ಧ ಅತಿಯಾಸೆಯೆ ದುಃಖಕ್ಕೆ ಮೂಲಕ ಕಾರಣ ಎನ್ನುವ ಸಂದೇಶವನ್ನು ಸಮಾಜಕ್ಕೆ ಸಾರಿದರು. ನವಯಾನ ಬುದ್ಧ ಧಮ್ಮ ಒಂದು ಸಂವಾದ ನೂರನೆ ಸರಣಿ ಕಾರ್ಯಕ್ರಮ ಮಡಿವಾಳ ಸಮಾಜಕ್ಕೆ ಸೇರಿದ ಶಿವಲಿಂಗಪ್ಪನವರ ಮನೆಯಲ್ಲಿ ನಡೆಯುತ್ತಿರುವುದು ನಿಜಕ್ಕೂ ಅರ್ಥಪೂರ್ಣ ಎಂದು ಪ್ರಶಂಸಿಸಿದರು.



## ಫಾಸ್ಟ್ ನ್ಯೂಸ್

### ಪರಶುರಾಂಪುರದ ಪೊಲೀಸ್ ಠಾಣೆಯಿಂದ ಅಪರಾಧ ತಡೆ ಮಾಸಾಚರಣೆ ಜಾಗೃತಿ



» **ಪರಶುರಾಂಪುರ**

ಗ್ರಾಮದ ಸರಕಾರಿ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢಶಾಲಾ ಆವರಣದಲ್ಲಿ ಸೋಮವಾರ ಅಪರಾಧ ಮಾಸಾಚರಣೆ ಅಂಗವಾಗಿ ಜಾಗೃತಿ ಜಾಥಕ್ಕೆ ಚಾಲನೆ ನಿಡಲಾಯಿತು. ಈ ವೇಳೆಯಲ್ಲಿ ಸಿಪಿಐ ಸೆಮಿವುಲ್ಲ ಮಾತನಾಡಿ , ಅಪರಾಧಗಳ ಬಗ್ಗೆ ಜನರಿಗೆ ಜಾಗೃತಿ ಮೂಡಿಸುವುದು , ಅಪರಾಧಗಳು ಅಗದಂತೆ ತಡೆಯಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅರಿವು ಮೂಡಿಸಲು ಅಪರಾಧ ತಡೆ ಮಾಸಾಚರಣೆ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.ಕೇವಲ ಪೊಲೀಸರಿಮದ ಅಪರಾಧಗಳ ತಡೆ ಸಾಧ್ಯವಿಲ್ಲ.ಇದಕ್ಕೆ ಸಾರ್ವಜನಿಕರ ಸಹಕಾರವೂ ಮುಖ್ಯ.ಈ ಹಿನ್ನೆಲೆಯಲ್ಲಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಡಿಸೆಂಬರ್ ಮಾಹೆಯನ್ನ ಅಪರಾಧ ಮಾಸಾಚರಣೆಯನ್ನಾಗಿ ಅಚರಿಸಲಾಗುತ್ತದೆ ಎಂದರು.ಪಿಎಸ್ಐ ಬಸವರಾಜು ಮಾತನಾಡಿ , ಪೊಲೀಸರು ಜನಸ್ನೇಹಿಗಳಾಗಿ ಸದಾ ಸಾರ್ವಜನಿಕರ ಪ್ರಾಣ,ಆಸ್ತಿ–ಪಾಸ್ತಿಗಳ ರಕ್ಷಣೆಗಾಗಿ ಶ್ರಮಿಸುತ್ತಾರೆ.ಅಪರಾಧಗಳ ತಡೆಗೆ ಪೊಲೀಸ್ ಇಲಾಖೆಗೆ ಸಹಕಾರ ನೀಡಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.ಯಾವುದೇ ಅಪರಾಧವನ್ನ ಕಂಡಿದ್ದ ಸಂದರ್ಭದಲ್ಲಿ ಧೈರ್ಯವಾಗಿ ಮುಂದೆ ಬಂದು ಸಾಕ್ಷಿ ಹೇಳಬೇಕು. ಒಂದು ವೇಳೆ ಹೀಗಾಗದಿದ್ದರೆ , ಸಾಕ್ಷಾಧಾರಗಳ ಕೊರತೆಯಿಂದ ತಪ್ಪಿಸ್ಥರು ತಪ್ಪಿಸಿಕೊಂಡು ಮತ್ತೆ ಮತ್ತೆ ಅಪಾರಧ ಚಟುವಟಿಕೆಗಳಲ್ಲಿ ತೊಡಗಲಿದ್ದಾರೆ ಎಂದರು. ವಿದ್ಯಾರ್ಥಿಗಳು ಗ್ರಾಮದ ಪ್ರಮುಖ ರಸ್ತೆಗಳು ಹಾಗೂ ವೃತ್ತಗಳಲ್ಲಿ ಸಂಚರಿಸಿ ಅಪರಾಧ ಮಾಸಾಚರಣೆ ಕುರಿತು ಜಾಗೃತಿ ಮೂಡಿಸಿದರು. ಕಾಲೇಜಿನ ಉಪನ್ಯಾಸಕರು , ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂಧಿ ಇದ್ದರು.

### ಬೆಳೆ ಪರಿಹಾರ ವಿಳಂಬ: ರೈತಸಂಘ ಪ್ರತಿಭಟನೆ



» **ಚಿತ್ರದುರ್ಗ**

ಬೆಳೆಪರಿಹಾರವನ್ನುನೀಡುವಲ್ಲಿವಿಳಂಬ,ಮಧ್ಯಂತರ ಪರಿಹಾರ ಮತ್ತು ಬೆಳೆವಿಮೆ ನೀಡುವಲ್ಲಿ ವಿಳಂಬ ಹಾಗೂ ರಾಷ್ಟ್ರೀಕೃತ ಮತ್ತು ಸಹಕಾರಿ ಬ್ಯಾಂಕುಗಳ ರೈತರ ಸಾಲಗಳ ಮನ್ನಾ ಹಾಗೂ ಗೋಶಾಲೆ ತೆರೆಯುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಇಂದು ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಬಟನೆಯನ್ನು ನಡೆಸಲಾಯಿತು. ಕರ್ನಾಟಕ ರಾಜ್ಯಾದಲ್ಲಿ ಬರಗಾಲ ಮುಂಗಾರು–ಹಿಂಗಾರಿನಲ್ಲಿ ಆವರಿಸಿದ್ದು, ಸರ್ಕಾರವು ಇದುವರೆಗೂ ರೈತರಿಗೆ ಯಾವುದೇ ಪರಿಹಾರ ಹಣವನ್ನು ನೀಡುವ ಬಗ್ಗೆ ಭರವಸೆ ಇಲ್ಲ. ರೂ.2000/– ಗಳನ್ನು ರೈತರ ಖಾತೆಗೆ ಜಮಾ ಮಾಡುವಂತೆವೆಂದು ಹೇಳುತ್ತಿದೆ. ಇದು ರೈತರಿಗೆ ಯಾವುದಾರಲ್ಲೂ ಸರ್ಕಾರದ ಮೇಲೆ ಭರವಸೆಯಿಲ್ಲ, ಎನ್.ಡಿ.ಆರ್.ಎಫ್ ಪ್ರಕಾರ ರೈತರಿಗೆ ಪರಿಹಾರದ ಮೊತ್ತವನ್ನು ಹಾಗೂ ಪಕ್ಕದ ಆಂದ್ರಪ್ರದೇಶ ಸರ್ಕಾರವು ರೈತರಿಗೆ ಹೆಕ್ಟರ್‌ಗೆ ರೂ.25000/– ಗಳಂತೆ ಪರಿಹಾರ ನೀಡುತ್ತಿದೆ. ಅದೇ ರೀತಿಯಾಗಿ ನಮ್ಮ ರಾಜ್ಯ ಸರ್ಕಾರವು ರೈತರಿಗೆ ಹೆಕ್ಟರ್‌ಗೆ ರೂ.25,000/–ಗಳಂತೆ ನೀಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು. ರೈತರ ಮುಂಗಾರು ಬೆಳೆ ಮಳೆ ಇಲ್ಲದೆ ಸಂಪೂರ್ಣ ನಾಶವಾಗಿದ್ದು, ಸರ್ಕಾರವು ಬರಗಾಲವೆಂದು ಘೋಷಣೆಮಾಡಿದ್ದು,ಇದುವರೆಗೂಬೆಳೆವಿಮೆಯು ರೈತರ ಖಾತೆಗಳಿಗೆ ಸಂದಾಯವಾಗಿರುವುದಿಲ್ಲ. ಕೂಡಲೇ ಬೆಳೆವಿಮೆಯನ್ನು ರೈತರ ಖಾತೆಗೆ ಜಮಾ ಮಾಡಬೇಕು, ರಾಜ್ಯದಲ್ಲಿ ಬರಗಾಲವಿದ್ದು, ರಾಜ್ಯದಲ್ಲಿ ಎಲ್ಲಿಯೂ ಸಹ ಗೋಶಾಲೆಯನ್ನು ತೆರೆದಿರುವುದಿಲ್ಲ. ದನ–ಕರುಗಳಿಗೆ ಮೇವಿನ ಕೊರತೆಯಿದ್ದು, ಕೂಡಲೇ ಪಂಚಾಯಿತಿಗೊಂದು ಗೋಶಾಲೆ ತೆರೆಯಬೇಕು, ಬೆಳಗಾವಿ ಅಧಿವೇಶನದಲ್ಲಿ ರಾಜ್ಯಸರ್ಕಾರವು ಸಹಕಾರ ಬ್ಯಾಂಕುಗಳಲ್ಲಿ ರೈತರು ಅಸಲು ಜಮಾ ಮಾಡಿದರೆ, ಬಡ್ಡಿ ಮನ್ನಾ ಮಾಡುತ್ತೇವೆಂದು ಹೇಳಿರುವುದು ಖಂಡನೀಯ. ರಾಜ್ಯದಲ್ಲಿ ಬೀಕರ ಬರಗಾಲವಿದ್ದು, ರೈತರು ಜೀವನ ನಡೆಸುವುದೆ ಕಷ್ಟಕರವಾಗಿದ್ದು, ಇಂತಹ ಪರಿಸ್ಥಿತಿಯಲ್ಲಿ ಸಹಕಾರ ಬ್ಯಾಂಕ್ ಹಾಗೂ ರಾಷ್ಟ್ರೀಕೃತ ಎಲ್ಲಾ ಬ್ಯಾಂಕುಗಳ ರೈತರ ಸಂಪೂರ್ಣ ಸಾಲಮನ್ನಾ ಮಾಡಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಬಸ್ತಿಹಳ್ಳಿ ಸುರೇಶ್ ಬಾಬು, ತಾಲ್ಲೂಕು ಅಧ್ಯಕ್ಷ ಧನಂಜಯ, ಮುಖಂಡರಾದ ಬೇಡರೆಡ್ಡಿ ಹಳ್ಳಿ ಬಸವರೆಡ್ಡಿ, ಭೂತಯ್ಯ, ತಿಪ್ಪೇಸ್ವಾಮಿ ಕರಿಯಣ್ಣ, ನಾಗರಾಜು ಉಪಸ್ಥಿತರಿದ್ದರು.

**ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ**

# ಜೇನು ಕೃಷಿ: ಕಡಿಮೆ ಬಂಡವಾಳ, ಪರಿಸರ ಸ್ನೇಹಿ

» **ಚಿತ್ರದುರ್ಗ**

ಜೇನು ಕೃಷಿಯಿಂದ ಆಹಾರ ಉತ್ಪಾದನೆಯಲ್ಲಿ ಹೆಚ್ಚಳ, ಮಕ್ಕಳ ಹಾಗೂ ವಯಸ್ಕರ ಆರೋಗ್ಯದಲ್ಲಿ ಸುಧಾರಣೆ, ರೈತರ ಹಾಗೂ ದೇಶದ ಆರ್ಥಿಕ ಬೆಳವಣಿಗೆ, ಉದ್ಯೋಗ ಸೃಜನೆ ಹಾಗೂ ಕಡಿಮೆ ಬಂಡಾಳ ಬೇಕಾದ ಪರಿಸರ ಸ್ನೇಹಿ ಉಪಕಸುಬು ಎಂದು ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಹೇಳಿದರು.





ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಹೊಳಲ್ಕೆರೆ ತಾಲ್ಲೂಕಿನ ರೈತರಿಗೆ ಜೇನು ಸಾಕಾಣಿಕೆ ಕುರಿತ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜೇನು ಸಾಕಾಣಿಕೆಯ ಕುರಿತು ತರಬೇತಿ ಕಾರ್ಯಕ್ರಮದಲ್ಲಿ ತಾಂತ್ರಿಕ ಮಾಹಿತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಹೊಳಲ್ಕೆರೆ ತಾಲ್ಲೂಕಿನ ಮಹಡಿ ಜೇನು ಸಾಕಾಣಿಕೆ ತಜ್ಞ ಮಂಜನಾಥ ಮಾತನಾಡಿ, ಜೇನು ಕೃಷಿಯಿಂದ ತಮ್ಮ ಅಡಿಕೆ ತೋಟದಲ್ಲಿ ಇಳುವರಿ ಹೆಚ್ಚಿದ್ದು, ಜೇನು ತುಪ್ಪ ಮಾರಾಟ, ಜೇನಿನ ಮೇಣ, ಜೇನಿನಿಂದ ಸಾಬೂನು ತಯಾರಿಕೆ, ನೋವು ನಿವಾರಕ ಔಷಧಿ, ಹಿಮ್ಮಡಿ ಹಾಗೂ ತುಟಿ ಹೊಡೆಯುವುದಕ್ಕೆ ಮುಲಾಮು ತಯಾರಿಸಿ ಜೇನು ಸಾಕಾಣಿಕೆಯನ್ನು ಒಂದು ಕಿರು ಗೃಹ ಉದ್ದಿಮೆಯಾಗಿ ನಡೆಸಲು ಸಹಕಾರಿಯಾಗಿದೆ ಎಂದು ತಮ್ಮ ಯಶೋಗಾಥೆಯನ್ನು ತಿಳಿಸುತ್ತಾ, ರೈತರಿಗೆ ಜೇನು ಸಾಕಾಣಿಕೆಗೆ ಹೆಚ್ಚಿನ ಆಸಕ್ತಿ ಮತ್ತು ಉತ್ಸಾಹಮೂಡಿಸಿದರು. ನಿವೃತ್ತಸಹಾಯಕ ಕೃಷಿ ನಿರ್ದೇಶಕರು ಹಾಗೂ ಜೇನು ತಜ್ಞ ಶಾಂತವೀರಯ್ಯ ಮಾತನಾಡಿ, ಹೊಳಲ್ಕೆರೆಯಲ್ಲಿ ಪ್ರಮುಖ ತೋಟಗಾರಿಕಾ ಬೆಳೆಯಾಗಿದ್ದ ಅಡಿಕೆಯಲ್ಲಿ ಉತ್ತಮ ಇಳುವರಿ ಪಡೆಯಲು ಪ್ರತಿ ಎಕರೆಗೆ 4–5 ಜೇನು ಪೆಟ್ಟಿಗೆಗಳನ್ನು ಇಡುವುದು ಸೂಕ್ತ. ಪ್ರತಿಯೊಬ್ಬ ರೈತರು ಸಹ ಕನಿಷ್ಟ 2 ಜೇನು ಪೆಟ್ಟಿಗೆಯೊಂದಿಗೆ ಜೇನು ಸಾಕಾಣಿಗೆ ಮುಂದಾಗಬೇಕು. ಜೇನು ಸಾಕಾಣಿಕೆಗೆ ಸಂಬಂಧಿಸಿದಂತೆ ಹೆಚ್ಚಿನ ತಾಂತ್ರಿಕ ಮಾಹಿತಿಗೆ ದೂರವಾಣಿ ಸಂಖ್ಯೆ 9449726068 ಗೆ ಕರೆ ಮಾಡುವ ಮೂಲಕ ಸಂಪರ್ಕಿಸಬಹುದು ಎಂದರು.

ತರಬೇತಿಯ ನಂತರ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಬಬ್ಬೂರು ಫಾರಂನ ಮಾವಿನ ತೋಪಿನಲ್ಲಿ ಇದ್ದ ಜೇನು ಪೆಟ್ಟಿಗೆ ಘಟಕಕ್ಕೆ ಭೇಟಿ ನೀಡಿ ರೈತರಿಗೆ ಜೇನು ಪೆಟ್ಟಿಗೆಯ ನಿರ್ವಹಣೆಯ ಕುರಿತು ಪ್ರಾತ್ಯಕ್ಷಿಕೆಯ ಮೂಲಕ ರೈತರಿಗೆ ಸಮಗ್ರ ಮಾಹಿತಿ ನೀಡಿದರು.


ಈ ಸಂದರ್ಭದಲ್ಲಿ ಸಹಾಯಕ ಕೃಷಿ ನಿರ್ದೇಶಕಿ ಎಂ.ಉಷಾರಾಣಿ (ರೈತ ಮಹಿಳೆ), ಕೃಷಿ ಅಧಿಕಾರಿಗಳಾದ ರಂಜಿತಾ ಮತ್ತು ಪವಿತ್ರ ಹಾಗೂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಿಬ್ಬಂದಿ ಮತ್ತು ರೈತರು ಹಾಜರಿದ್ದರು.

# ದೇಗುಲ ದರ್ಶನ ಕಾರ್ಯಕ್ರಮಕ್ಕೆ ಚಾಲನೆ

**ಸಮಾಜಮುಖಿ ಪುಣ್ಯಕಾರ್ಯಗಳು ಮುಂದಿನ ಪೀಳಿಗೆಗೆ ಇತಿಹಾಸವಾಗಬಲ್ಲವು–ಸದ್ಗುರುಪ್ರದೀಪ್**

» **ಹೊಸದುರ್ಗ**

ಸಾವಿರಾರು ವರ್ಷ ಗತಿಸಿದರು ಗತಕಾಲದ ಧಾರ್ಮಿಕ ಇತಿಹಾಸವನ್ನು ನಮ್ಮಿಂದ ದೂರ ಮಾಡಲು ಸಾಧ್ಯವಿಲ್ಲ, ಒಬ್ಬ ವ್ಯಕ್ತಿ ತನ್ನ ಜೀವಿತಾವಧಿಯಲ್ಲಿ ಮಾಡಿದ ಸಮಾಜಮುಖಿ ಪುಣ್ಯಕಾರ್ಯಗಳು ಮುಂದಿನ ಪೀಳಿಗೆಗೆ ಇತಿಹಾಸವಾಗಬಲ್ಲವು ಎಂದು ಸದ್ಗುರು ಸಂಸ್ಥೆಯ ಮಾಲೀಕ ಹಾಗೂ ಉದ್ಯಮಿ ಡಿ.ಎಸ್ ಪ್ರದೀಪ್ ತಿಳಿಸಿದರು.



ಪಟ್ಟಣದ ಪುರಸಭೆಯ ಮುಂಭಾಗದ ಗಣಪತಿ ದೇವಸ್ಥಾನದಲ್ಲಿ ಶನಿವಾರ ನಡೆದ ಸದ್ಗುರು ಆಯುರ್ವೇದ ಸಂಸ್ಥೆ ಪ್ರಾಯೋಜಕತ್ವದಲ್ಲಿ ಮತ್ತು ಗೋಲ್ಡನ್ ವಾಯ್ಸ್ ಹೊಸದುರ್ಗ ರಾಘು ನಿರ್ದೇಶನದಲ್ಲಿ ನಡೆಯುತ್ತಿರುವ (ಯು ಟ್ಯೂಬ್‌ನಲ್ಲಿ ಪ್ರಸಾರ ) ಹೊಸದುರ್ಗ ತಾಲೂಕಿನ ದೇಗುಲ ದರ್ಶನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಸಾವಿರಾರು ವರ್ಷಗಳ ಇತಿಹಾಸ ವಿರುವ ನಾಲ್ಕಾರು ರಾಜಮನೆತನಗಳು ಆಳ್ವಿಕೆ ನಡೆಸಿ ಮತ್ತು ಅವರ ಆಳ್ವಿಕೆಯ ಅವಧಿಯಲ್ಲಿ ಧಾರ್ಮಿಕ ಸಹಿಷ್ಣತೆಗೆ ಉತ್ತುಂಗ ಸ್ಥಿತಿಯಲ್ಲಿತ್ತು, ಭಾರತವನ್ನು ಆಳಿದ ರಾಜ ಮನೆತನಗಳು ನೂರಾರು ದೇವಾಲಯಗಳನ್ನು ನಿರ್ಮಿಸಿ ನಮ್ಮಿಂದ ಮರೆಯಾಗಿದ್ದಾರೆ, ಪ್ರಸ್ತುತ ಆ ದೇವಾಲಯಗಳು ಅವಸಾನದ ಅಂಚಿನಲ್ಲಿವೆ, ಈ ದೇವಾಲಯಗಳ ಅಭಿವೃದ್ಧಿ ಮಾಡಿ ಮುಂದಿನ ಪೀಳಿಗೆಗೆ ಉಳಿಸುವ ಜವಾಬ್ದಾರಿ ನಮ್ಮ ಮತ್ತು ನಿಮ್ಮಗಳ ಮೇಲಿದೆ ಹೊಸದುರ್ಗ ತಾಲೂಕಿನ ಗ್ರಾಮಗಳ ದೇವಾಲಯಗಳ ಇತಿಹಾಸವನ್ನು ದಾಖಲಿಸಲು ನಮ್ಮ ತಂಡ ನಿಮ್ಮ ಗ್ರಾಮಗಳಿಗೆ ಬರಲಿದ್ದು ಗ್ರಾಮದ ದೇವಸ್ಥಾನ ಅಭಿವೃದ್ಧಿ ಸಮಿತಿ, ಗುಡಿ ಗೌಡರು, ಹಾಗೂ ಜನ ಪ್ರತಿನಿಧಿಗಳು ಮತ್ತು ಗ್ರಾಮಸ್ಥರು ಸಹಕರಿಸಿ ದೇವಸ್ಥಾನದ ಇತಿಹಾಸವನ್ನು ತಿಳಿಸಿದಾಗ ಈ ಇತಿಹಾಸವನ್ನ ಮುಂದಿನ ಪೀಳಿಗೆಗೆ ದಾಖಲು ಮಾಡುವ ಜವಾಬ್ದಾರಿ ನಮ್ಮಗಳ ಮೇಲಿದೆ ಎಂದರು.

ಹೊಸದುರ್ಗ ತಾಲೂಕಿನ ದೇವರುಗಳ ಪವಾಡ, ಮಹಿಮೆ ಮತ್ತು ನೈಜ ಇತಿಹಾಸವನ್ನ ತಾಲೂಕು ಮತ್ತು ರಾಜ್ಯಾದ್ಯಂತ ತಿಳಿಸುವುದೇ ನಮ್ಮ ಸದ್ಗುರು ಸಂಸ್ಥೆಯ ಪ್ರಾಯೋಜಕತ್ವದಲ್ಲಿ ನಡೆಯುವ ದೇಗುಲ ದರ್ಶನ ಕಾರ್ಯಕ್ರಮದ ಉದ್ದೇಶ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಪುರಸಭಾ ಸದಸ್ಯೆ ಶ್ರೀಮತಿ ಡಾ. ಸ್ವಾತಿ ಪ್ರದೀಪ್, ಮಯೂರ್‌ಶೆಟ್ಟಿ, ವಿರಾಟ್ ಹಿಂದೂ ಮಹಾಗಣಪತಿ ಅಧ್ಯಕ್ಷ ಪ್ರದೀಪ್, ಗೋಲ್ಡನ್ ವಾಯ್ಸ್ ಹೊಸದುರ್ಗ ರಾಘು, ತುಂಬಿನಕೆರೆ ಬಸವರಾಜ್, ಮುಂತಾದವರಿದ್ದರು.

# ಪ್ರವಾಸಿ ಮಂದಿರದಲ್ಲಿ ಹೈಡ್ರಾಮ

**ಮಾಜಿ ಸಚಿವ ಕಾರಜೋಳ ಹಾಗೂ ಮಾದಿಗ ಸಮುದಾಯದ ಮುಖಂಡರ ನಡುವೆ ವಾಗ್ವಾದ**



» **ಚಿತ್ರದುರ್ಗ**

ನಗರದ ಪ್ರವಾಸಿ ಮಂದಿರದ ಪತ್ರಿಕಾಗೋಷ್ಠಿ ವೇಳೆ ಮಾದಿಗ ಸಮಾಜದ ಮುಖಂಡರು ಮಾಜಿ ಸಚಿವ ಗೋವಿಂದ ಕಾರಜೋಳ ಅವರನ್ನ ತರಾಟೆಗೆ ತೆಗೆದುಕೊಂಡಿದ್ದಾರೆ.

ಮಾಜಿ ಸಚಿವ ಗೋವಿಂದ ಕಾರಜೋಳ ಅವರು ಸರ್ಕಾರದ ವೈಫಲ್ಯದ ಕುರಿತು ಚಿತ್ರದುರ್ಗದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿ ನಡೆಸುತ್ತಿದ್ದರು ಈ ವೇಳೆ ಏಕಾಏಕಿ ಒಳ ನುಗ್ಗಿದ ಭ್ರಷ್ಟಾಚಾರ ನಿರ್ಮೂಲನ ಸಮಿತಿ ಹಾಗೂ ಮಾದಿಗ ಹೋರಾಟ ಸಮಿತಿ ಮುಖಂಡರು ಗೋವಿಂದ ಕಾರಜೋಳ ಅವರನ್ನು ತರಾಟೆಗೆ ತೆಗೆದುಕೊಂಡಿದ್ದು ದಲಿತರಿಗೆ ಬಿಜೆಪಿ ಹಾಗೂ ಮಾಜಿ ಸಮಾಜ ಕಲ್ಯಾಣ ಸಚಿವ ಗೋವಿಂದ ಕಾರಜೋಳ ಅವರಿಂದ ಅನ್ಯಾಯವಾಗಿದೆ ಎಂದು ಆಕ್ರೋಷ ವ್ಯಕ್ತಪಡಿಸಿದ್ದಾರೆ.

ಅಷ್ಟೇ ಅಲ್ಲದೆ ಪತ್ರಿಕಾ ಗೋಷ್ಠಿ ಮಧ್ಯೆಯೇ ಮಾಜಿ ಸಚಿವ ಗೋವಿಂದ ಕಾರಜೋಳ ಮತ್ತು ಮುಖಂಡರ ನಡುವೆ ವಾಗ್ವಾದ ಸಹ ನಡೆದಿದ್ದು ಮೊದಲು ಹೊರಗೆ ಹೋಗುವಂತೆ ಗೋವಿಂದ ಕಾರಜೋಳ ಬೈದು ರೇಗಾಡಿದ್ದು ನಿಮಗೆ ಅನ್ಯಾಯವಾಗಿದ್ದರೆ ಆಮೇಲೆ ಬಂದು ಕೇಳಿ ಎಂದು ಹೇಳಿದ ಬೈದು ಕಳುಹಿಸಿದ್ದಾರೆ.

ಅಷ್ಟೇ ಅಲ್ಲದೆ ಗೂಂಡಾಗಿರಿ ಮಾಡುತ್ತಿದ್ದೀರಾ ಎಂದು ಕೂಗಾಡಿದ ಗೋವಿಂದ ಕಾರಜೋಳ ಅವರು ಇಂದೊಂದು ಗೂಂಡಾ ರಾಜ್ಯವಾಗಿದ್ದು ಸಿದ್ದರಾಮಯ್ಯ ಅವರು ಕೂಡಲೇ ಗಲಾಟೆ ಮಾಡಿದವರನ್ನು ಸಂಜೆಯೊಳಗೆ ಬಂಧಿಸಿ ಪ್ರಕರಣ ದಾಖಲಿಸುವಂತೆ ಒತ್ತಾಯಿಸಿದ್ದು ಈ ಬಗ್ಗೆ ಡಿಜಿಪಿಗೂ ಸಹ ಸ್ಥಳದಲ್ಲೆ ಕರೆ ಮಾಡಿದ ಗೋವಿಂದ ಕಾರಜೋಳ ಅವರು ನಿಮ್ಮ ಎಸ್ಪಿ ಅವರು ಕರೆ ಸ್ವೀಕರಿಸುತ್ತಿಲ್ಲ ಪತ್ರಿಕಾಗೋಷ್ಠಿ ವೇಳೆ ಗೂಂಡಾಗಳು ದಾಂದಲೆ ಮಾಡಿದ್ದಾರೆ ಹಾಗಾಗಿ ಈ ಕೂಡಲೇ ದಾಂದಲೆ ಮಾಡಿದವರನ್ನ ಬಂದಿಸಬೇಕು ಇಲ್ಲದಿದ್ದಲ್ಲಿ ಡಿಸಿ ಕಚೇರಿ ಬಳಿ ನಾನು ಧರಣಿ ಕೂರುತ್ತೇನೆ ಎಂದು ಡಿಜಿಪಿಗೆ ಗೋವಿಂದ ಕಾರಜೋಳ ಹೇಳಿದರು.

## ಡಿಸೆಂಬರ್ ಮಾಹೆಗೆ ಆಹಾರ ಧಾನ್ಯ ಹಂಚಿಕೆ ಮಾಡಲಾಗಿದೆ

**ದಾವಣಗೆರೆ:** ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಹೊನ್ನಾಳಿ ತಾಲ್ಲೂಕಿನ ಪಡಿತರ ಚೀಟಿದಾರರಿಗೆ ಡಿಸೆಂಬರ್ ಮಾಹೆಯಲ್ಲಿ ಬಿಡುಗಡೆಯಾದ ಪಡಿತರ ಆಹಾರ ಧಾನ್ಯವನ್ನು ಹಂಚಿಕೆ ಮಾಡಲಾಗಿದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ 21 ಕೆ.ಜಿ ಅಕ್ಕಿ ಮತ್ತು ರಾಗಿ 14ಕೆ.ಜಿ ಪ್ರತಿ ಕಾರ್ಡಿಗೆ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ 2ಕೆ.ಜಿ ರಾಗಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು.ಪಡಿತರ ಚೀಟಿದಾರರ ಖಾತೆಗೆ ನೇರ ನಗದು ವರ್ಗಾವಣೆ ಸಂಬಂಧಿಸಿದಂತೆ, ಪಡಿತರ ಚೀಟಿದಾರರು ಕಡ್ಡಾಯವಾಗಿ ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆಯನ್ನು ಮಾಡಿಸಿಕೊಳ್ಳಬೇಕು ಹಾಗೂ ಹಣ ಪಡೆಯಲು ಯಾವುದೇ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ತಮ್ಮ ಬ್ಯಾಂಕ್ ಶಾಖೆಗಳಿಗೆ ಹಾಗೂ ಸ್ಥಳೀಯ ಆಹಾರ ನಿರೀಕ್ಷರನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳಬೇಕು ಎಂದು ಹೊನ್ನಾಳಿ ತಹಶೀಲ್ದಾರ್ ಪಟ್ಟರಾಜಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಅಂಬೇಡ್ಕರ್ ಕನಸು ನನಸಾಗಲು ಸಂಘಟಿತರಾಗಿ

» **ಚಳ್ಳಕೆರೆ**

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರು ಹಲವಾರು ಸಂಕಷ್ಟಗಳ ನಡುವೆಯೂ ಶಿಕ್ಷಣವನ್ನು ಪಡೆದು ದೇಶಕ್ಕಾಗಿ ನಿರಂತರ ಶ್ರಮಿಸಿದ ಶ್ರೇಷ್ಠನಾಯಕ. ಬಾಲ್ಯದಿಂದಲೇ ಅವಮಾನ, ಕೀಳಿರಿಮೆಯಿಂದ ನೊಂದರೂ ತಮ್ಮ ಛಲವನ್ನು ಬಿಡದೆ ಶೋಷಿತ ಸಮಾಜಕ್ಕಾಗಿ ಗಟ್ಟಿಯಾಗಿ ನಿಂತವರು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪರಿವರ್ತನಾವಾದ) ಹಿರಿಯ ಹೋರಾಟಗಾರ ಶ್ರೀಧರಕಲಿವೀರ್ ತಿಳಿಸಿದರು.



ಅವರು, ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪರಿವರ್ತನಾವಾದ) ಚಿತ್ರದುರ್ಗ ಮತ್ತು ತಾಲ್ಲೂಕು ಸಮಿತಿ ಹಮ್ಮಿಕೊಂಡಿದ್ದ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಪರಿನಿಬ್ಬಾಣ ಅಂಗವಾಗಿ ಸಂವಿಧಾನ ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಇಂದಿಗೂ ಸಹ ದೇಶದ ಅನೇಕ ಮುಗ್ದ ಜೀವಿಗಳಿಗೆ ಸಂವಿಧಾನದ ಬಗ್ಗೆ ಇನ್ನೂ ಹೆಚ್ಚಿನ ಮಾಹಿತಿ ಇಲ್ಲ. ನಮ್ಮ ಸಂವಿಧಾನವನ್ನು ಪ್ರತಿಯೊಬ್ಬ ನಾಗರೀಕರೂ ಅರ್ಥೈಸಿಕೊಳ್ಳುವ ನಿಟ್ಟಿನಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದರು.

ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿದ್ದ ಸರ್ವಧರ್ಮದ ಶಾಂತಿಪೀಠದ ಶ್ರೀರಾಮಮೂರ್ತಿಸ್ವಾಮೀಜಿ ಮಾತನಾಡಿ, ಶೋಷಣೆ ಮುಕ್ತ ಸಮಾಜವನ್ನು ಕಾಣಬೇಕೆಂಬ ಡಾ.ಬಿ.ಆರ್. ಅಂಬೇಡ್ಕರ್ ಕನಸು ಇನ್ನೂ ನನಸಾಗಿಲ್ಲ. ಅಂಬೇಡ್ಕರ್‌ರವರ ವಿಚಾರಧಾರೆಗಳನ್ನು ಹೆಚ್ಚು, ಹೆಚ್ಚು ಪ್ರಚಾರ ಮಾಡುವಲ್ಲಿ ನಾವು ಸಫಲರಾಗಿಲ್ಲ. ಡಾ.ಬಿ.ಆರ್. ಅಂಬೇಡ್ಕರ್‌ರವರು ದೇಶ, ಸಮಾಜ, ಶೋಷಿತ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಹಗಲು, ರಾತ್ರಿ ಪ್ರಾಮಾಣಿಕವಾಗಿ ಅನೇಕ ಕಷ್ಟಗಳನ್ನು ಎದುರಿಸಿ ಹೋರಾಡಿದ ಮಹಾನ್ ತ್ಯಾಗಿ. ಇಂದಿಗೂ ಸಹ ಅವರ ಆದರ್ಶಗಳು ನಮಗೆ ಸ್ಪೂರ್ತಿಯಾಗಬೇಕು. ಈ ನಿಟ್ಟಿನಲ್ಲಿ ಸರ್ಕಾರ ರಚನಾತ್ಮಕ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಸಂಚಾಲಕ ಹೆಗ್ಗೆರೆ ಕೆ.ಮಂಜುನಾಥ, ರಾಜ್ಯ ಪ್ರಧಾನ ಸಂಚಾಲಕ ಎಂ.ಗೋವಿಂದರಾಜು, ಕಲಾಮಂಡಳಿ ಸಂಚಾಲಕ ಕೆ.ಟಿ.ಮುತ್ತುರಾಜ್, ಶಿವಮೂರ್ತಿ, ಪೆನ್ನೇಶ್, ಶಾಂತಮ್ಮ, ಪ್ರಧಾನ ಸಂಚಾಲಕ ಟಿ.ಗೋವಿಂದಪ್ಪ, ಪ್ರತಾಪ್, ಇಂದಿರಮ್ಮ, ಜೆ.ಮಂಜುನಾಥ, ಓ.ಬಸವರಾಜ,ಡಿ.ರುದ್ರಮುನಿ,ಸಂಘಟನಾ ಸಂಚಾಲಕ ದ್ಯಾವರನಹಳ್ಳಿ ಸುರೇಶ್, ಜೋಗಿತಿಪ್ಪೇಸ್ವಾಮಿ, ಕಲಾವಿದ ರಾಜಣ್ಣ ಮುಂತಾದವರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T